ಬುಧವಾರ 29.10.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 84
Digital Varthe Kannada Daily
Volume 01 - Issue 84
Wednesday
29.10.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಕರ್ನಾಟಕ ಪೊಲೀಸ್ ಕ್ಯಾಪ್ ಬದಲಾವಣೆ



ಕರ್ನಾಟಕದಲ್ಲಿ ಸ್ಲೋಚ್ ಹ್ಯಾಟ್ ಬದಲಿಗೆ 'ಪೀಕ್ ಕ್ಯಾಪ್' ಬರಲಿದೆ. ಹಿಂದೆ ಕರ್ನಾಟಕದ ಕಾನ್‌ಸ್ಟೆಬಲ್ ಮತ್ತು ಹೆಡ್ ಕಾನ್‌ಸ್ಟೆಬಲ್ ಸ್ಲೋಚ್ ಹ್ಯಾಟ್ ಕ್ಯಾಪ್‌ಗಳನ್ನು ಹಾಕುತ್ತಿದ್ದರು. ಇದೀಗ ಇದರಲ್ಲಿ ಬದಲಾವಣೆಯನ್ನು ತರಲು ಮುಂದಾಗಿದ್ದಾರೆ. ರಾಜ್ಯದ ಮುಖ್ಯಮಂತ್ರಿ ಹಾಗೂ ಗೃಹಸಚಿವರು ಇಂದು ಈ ಹೊಸ ಕ್ಯಾಪ್‌ಗಳು ನೀಡಲಿದ್ದಾರೆ.

ಕೇರಳದಲ್ಲಿ ""ಪೀಕ್ ಕ್ಯಾಪ್"" ಧರಿಸಲಾಗುವುದು. ಇದು ನೀಲಿ ಬಣ್ಣವನ್ನು ಹೊಂದಿದ್ದು, ಇದು ಸಾರ್ವಜನಿಕ ಮನ್ನಣೆ ಮತ್ತು ಅಧಿಕಾರ ಪ್ರಜ್ಞೆಯನ್ನು ಸಂಕೇತವಾಗಿದ್ದು, ಇದು ಬಿಸಿಲು ಮತ್ತು ಮಳೆಯಿಂದ ರಕ್ಷಿಸುವ ಕೂಡ ಸಹಾಯವಾಗಿದೆ. ಚಪ್ಪಟೆಯಾದ ಮೇಲ್ಭಾಗ, ಬಾಗಿದ ಮುಖವಾಡ ಮತ್ತು ಮುಂಭಾಗದಲ್ಲಿ ಕೇರಳ ಪೊಲೀಸ್ (ಕೆಪಿ) ಲಾಂಛನವನ್ನು ಹೊಂದಿದೆ.

ಮಹಾರಾಷ್ಟ್ರ ಪೊಲೀಸ್ ಕಾನ್ಸ್ಟೇಬಲ್ ಕ್ಯಾಪ್ "ಪೀಕ್ ಕ್ಯಾಪ್" ಅಥವಾ ಸಾಂಪ್ರದಾಯಿಕ ಪೊಲೀಸ್ ಕ್ಯಾಪ್ ಎಂದು ಕರೆಯಲಾಗುತ್ತದೆ. ಇದು ಕಡು ನೀಲಿ ಬಣ್ಣದ ಟೋಪಿಯಾಗಿದ್ದು, ಚಪ್ಪಟೆಯಾದ ಮೇಲ್ಭಾಗ ಮತ್ತು ಬಾಗಿದ ವಿನ್ಯಾಸವನ್ನು ಹೊಂದಿದೆ. ಕ್ಯಾಪ್‌ನ ಮುಂಭಾಗದಲ್ಲಿ ಮಹಾರಾಷ್ಟ್ರ ಪೊಲೀಸ್ ಲಾಂಛನವಿದ್ದು, ಇದು ನಕ್ಷತ್ರ ಮತ್ತು ರಕ್ಷಣೆಯನ್ನು ಸೂಚಿಸಲು ಎರಡು ವೃತ್ತವನ್ನು ಒಳಗೊಂಡಿದೆ.

ಆಂಧ್ರಪ್ರದೇಶ ಪೊಲೀಸ್ ಕಾನ್ಸ್ಟೇಬಲ್ ಕ್ಯಾಪ್‌ನ್ನು ಪೀಕ್ ಕ್ಯಾಪ್ ಎಂದು ಕರೆಯಲಾಗುತ್ತದೆ.

ಪೀಕ್ ಕ್ಯಾಪ್ ನೀಲಿ ಬಣ್ಣವನ್ನು ಹೊಂದಿದೆ.ಗೋವಾದಲ್ಲಿ "ಪೀಕ್ ಕ್ಯಾಪ್" ಧರಿಸಿಕೊಳ್ಳಲಾಗುತ್ತದೆ. ಈ ಕ್ಯಾಪ್‌ನ ಮುಂಭಾಗದಲ್ಲಿ ಸಾಮಾನ್ಯವಾಗಿ ಪೊಲೀಸ್ ಪಡೆಯ ಲಾಂಛನ ಇದೆ. ಈ ಲಾಂಛನವು ಅಧಿಕಾರ ಮತ್ತು ಜವಾಬ್ದಾರಿಯ ಸಂಕೇತವಾಗಿದೆ.

ತೆಲಂಗಾಣದಲ್ಲಿ ಕಾನ್‌ಸ್ಟೆಬಲ್ ಮತ್ತು ಹೆಡ್ ಕಾನ್‌ಸ್ಟೆಬಲ್‌ಗಳು "ನೇವಿ ಬ್ಲೂ ಪೀಕ್ ಕ್ಯಾಪ್" ಬಳಸುತ್ತಾರೆ. ಇದೀಗ ಕರ್ನಾಟಕಕ್ಕೂ ಕೂಡ ಈ ಕ್ಯಾಪ್‌ಗಳನ್ನು ಬಳಸಲಾಗುತ್ತದೆ. ಇದು ಬಿಗಿಯಾದ ಫಿಟ್, ಸುಧಾರಿತ ವಿನ್ಯಾಸ ಮತ್ತು ವೃತ್ತಿಪರ ನೋಟವನ್ನು ನೀಡುತ್ತದೆ.

ದೆಹಲಿ ಪೊಲೀಸ್ ಕಾನ್‌ಸ್ಟೆಬಲ್‌ಗಳು ಧರಿಸುವ ಅತ್ಯಂತ ಸಾಮಾನ್ಯ ಶೈಲಿಯ ಕ್ಯಾಪ್, ಕಾನ್‌ಸ್ಟೆಬಲ್‌ಗಳು "ಬೆರೆಟ್ ಕ್ಯಾಪ್" ಹಾಕಿಕೊಳ್ಳುತ್ತಾರೆ. ಇದು ಅನೌಪಚಾರಿಕ ಸಮವಸ್ತ್ರಗಳ ಭಾಗವಾಗಿದೆ. ಇದು ಮಿಲಿಟರಿ ಶೈಲಿಯ ಕ್ಯಾಪ್ ಆಗಿದ್ದು, ಅದರ ನೋಟ ಕೂಡ ಅದೇ ರೀತಿ ಇದೆ. ಮೃದುವಾದ, ದುಂಡಗಿನ, ಚಪ್ಪಟೆಯಾಗಿದ್ದು, ಕಡು ನೀಲಿ ಬಣ್ಣದಲ್ಲಿರುತ್ತದೆ.

ತಮಿಳುನಾಡು ಪೊಲೀಸ್ ಕಾನ್‌ಸ್ಟೆಬಲ್‌ಗಳು ಧರಿಸುವ ಕ್ಯಾಪ್ "ಪೀಕ್ಡ್ ಕ್ಯಾಪ್", ಇದನ್ನು ಶಿಖರ ಕ್ಯಾಪ್ ಎಂದು ಕೂಡ ಕರೆಯುತ್ತಾರೆ. ನೌಕಾ ನೀಲಿ ಅಥವಾ ಖಾಕಿ ಬಣ್ಣವನ್ನು ಹೊಂದಿರುತ್ತದೆ. ತಮಿಳುನಾಡು ಪೊಲೀಸ್ ಕಾನ್‌ಸ್ಟೆಬಲ್‌ಗಳು ಧರಿಸುವ ಕ್ಯಾಪ್ "ಪೀಕ್ಡ್ ಕ್ಯಾಪ್", ಇದನ್ನು ಶಿಖರ ಕ್ಯಾಪ್ ಎಂದು ಕೂಡ ಕರೆಯುತ್ತಾರೆ. ನೌಕಾ ನೀಲಿ ಅಥವಾ ಖಾಕಿ ಬಣ್ಣವನ್ನು ಹೊಂದಿರುತ್ತದೆ.

## ನೆಲಮಂಗಲ ಗ್ಯಾಂಗ್ ರೇ*ಪ್ ಪ್ರಕರಣ



**ನೆಲಮಂಗಲ:** ಬೆಂಗಳೂರು ಉತ್ತರ ತಾಲೂಕಿನ ಗಂಗೊಂಡನಹಳ್ಳಿ ಗ್ರಾಮದಲ್ಲಿ ದೀಪಾವಳಿ ಹಬ್ಬದ ದಿನ (ಅಕ್ಟೋಬರ್ 26, 2025) ಗಂಗೊಂಡನಹಳ್ಳಿಯ ಮನೆಯೊಂದಕ್ಕೆ ನುಗ್ಗಿದ ದುಷ್ಕರ್ಮಿಗಳು ಪುರುಷನನ್ನು ಕಟ್ಟಿಹಾಕಿ ಹಲ್ಲೆ ಮಾಡಿ, ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿ ನಾಪತ್ತೆಯಾಗಿದ್ದರು. ಈ ಘಟನೆಯ ಪ್ರಮುಖ ಆರೋಪಿಯಾದ ಮಿಥುನ್‌ನನ್ನು ನೆಲಮಂಗಲ ಪೊಲೀಸರು ಬಂಧಿಸಿದ್ದಾರೆ.

ಪ್ರಕರಣ ದಾಖಲಾದ ಕೂಡಲೇ ತಲೆಮರೆಸಿಕೊಂಡಿದ್ದ ಮಿಥುನ್, ನೆಲಮಂಗಲ ತಾಲೂಕಿನ ಶಿವಗಂಗೆ ಸಮೀಪದಲ್ಲಿ ತಲೆಮರೆಸಿಕೊಂಡಿದ್ದ. ನೆಲಮಂಗಲ ಡಿವೈಎಸ್‌ಪಿ ಜಗದೀಶ್ ನೇತೃತ್ವದ ತಂಡವು ಆರೋಪಿಯನ್ನು ಹುಡುಕಿ ಬಂಧಿಸಿದ್ದಾರೆ. ಈ ಪ್ರಕರಣದ ಒಟ್ಟು ಆರು ಆರೋಪಿಗಳನ್ನು ಪೊಲೀಸರು ಈಗಾಗಲೇ ಬಂಧಿಸಿದ್ದಾರೆ. ಇವರಲ್ಲಿ ಇಬ್ಬರು ಅಪ್ರಾಪ್ತ ಬಾಲಕರಾಗಿದ್ದು, ಅವರನ್ನು ಬಾಲಾಪರಾಧಿ ಕಾರಾಗೃಹಕ್ಕೆ ಕಳುಹಿಸಲಾಗಿದೆ. ಉಳಿದಂತೆ ಮಿಥುನ್, ಕಾರ್ತಿಕ್, ನವೀನ್, ಮತ್ತು ಗ್ಲಾನಿ ಬಂಧನದಲ್ಲಿದ್ದಾರೆ.

ದುಷ್ಕರ್ಮಿಗಳು ಮನೆಗೆ ನುಗ್ಗಿ, ಮನೆಯಲ್ಲಿದ್ದ ಪುರುಷನನ್ನು ಕಟ್ಟಿಹಾಕಿ, ದೈಹಿಕವಾಗಿ ಹಲ್ಲೆ ಮಾಡಿದ ನಂತರ ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿದ್ದಾರೆ. ಘಟನೆಯ ಬಗ್ಗೆ ದೂರು ದಾಖಲಾದ ಕೂಡಲೇ, ನೆಲಮಂಗಲ ಪೊಲೀಸರು ತೀವ್ರ ತನಿಖೆಯನ್ನು ಆರಂಭಿಸಿದರು. ಮಿಥುನ್, ಈ ಪ್ರಕರಣದಲ್ಲಿ ಎ1 ಆರೋಪಿಯಾಗಿದ್ದು, ತಲೆಮರೆಸಿಕೊಂಡಿದ್ದನು. ಆದರೆ, ಶಿವಗಂಗೆಯ ಸಮೀಪದಲ್ಲಿ ಅವನನ್ನು ಕಂಡುಹಿಡಿದ ಪೊಲೀಸರು, ಯಶಸ್ವಿಯಾಗಿ ಬಂಧಿಸಿದರು..

### ಇಬ್ಬರು ಬೈಕ್ ಕಳ್ಳರ ಬಂಧನ - 16.52 ಲಕ್ಷ ಮೌಲ್ಯದ 30 ಬೈಕ್ ವಶಕ್ಕೆ



**ದಾವಣಗೆರೆ:** ಇಬ್ಬರು ಬೈಕ್ ಕಳ್ಳರನ್ನು ಹರಿಹರ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಂಧಿತರಿಂದ 16.52 ಲಕ್ಷ ರೂ. ಮೌಲ್ಯದ 30 ಬೈಕ್‌ಗಳನ್ನು ವಶಕ್ಕೆ ಪಡೆಯಲಾಗಿದೆ.

ಬಂಧಿತ ಆರೋಪಿಗಳನ್ನು ಚಿಕ್ಕಮಗಳೂರಿನ ಪ್ರತಾಪ್ ಹಾಘೂ ಬಳ್ಳಾರಿ ಜಿಲ್ಲೆಯ ಬೋಜರಾಜ್ ಎಂದು ಗುರುತಿಸಲಾಗಿದೆ. ಆರೋಪಿಗಳು ಹರಿಹರದ ಇಂದಿರಾನಗರ, ವಿದ್ಯಾನಗರ ಸೇರಿದಂತೆ ಹಲವು ಕಡೆ ಬೈಕ್ ಕಳ್ಳತನ ಮಾಡಿದ್ದರು. ಪ್ರಕರಣದ ಬೆನ್ನು ಹತ್ತಿದ್ದ ಪೊಲೀಸರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಪೊಲೀಸರು ಕಾನೂನು ಪ್ರಕ್ರಿಯೆ ಮುಗಿಸಿ ಮಾಲೀಕರಿಗೆ ಬೈಕ್‌ಗಳನ್ನು ಮರಳಿಸಿದ್ದಾರೆ. ಪೊಲೀಸರ ಕಾರ್ಯಕ್ಕೆ ಎಸ್‌ಪಿ ಉಮಾ ಪ್ರಶಾಂತ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

### ಭಿಕ್ಷೆ ಬೇಡುತ್ತಾ ರಸ್ತೆ ದಾಟುತ್ತಿದ್ದ ವೃದ್ಧನ ಮೇಲೆ ಹರಿದ ಲಾರಿ



**ಬೆಳಗಾವಿ:** ಭಿಕ್ಷೆ ಬೇಡುತ್ತಾ ರಸ್ತೆ ದಾಟುತ್ತಿದ್ದ ವೃದ್ಧನ ಮೇಲೆ ಲಾರಿಯೊಂದು ಹರಿದು ಸಾವನ್ನಪ್ಪಿರುವ ಘಟನೆ ಬೆಳಗಾವಿಯಲ್ಲಿ ನಡೆದಿದೆ.

ಬೆಳಗಾವಿ ನಗರದ ಕೃಷ್ಣದೇವರಾಯ ವೃತ್ತದ ಸಿಗ್ನಲ್‌ನಲ್ಲಿ ವೃದ್ಧನೋರ್ವ ಭಿಕ್ಷೆ ಬೇಡುತ್ತಿದ್ದರು. ಈ ವೇಳೆ ಸಿಗ್ನಲ್ ಬಿಡುತ್ತಿದ್ದಂತೆ ವೃದ್ಧ ರಸ್ತೆ ದಾಟುತ್ತಿದ್ದರು. ಇದೇ ಸಮಯಕ್ಕೆ ಲಾರಿ ಚಾಲಕನೋರ್ವ ಲಾರಿಯನ್ನು ಮುಂದೆ ಚಲಾಯಿಸಿದ ಪರಿಣಾಮ ಭಿಕ್ಷುಕ ಲಾರಿ ಚಕ್ರದಲ್ಲಿ ಸಿಲುಕಿ ಸಾವನ್ನಪ್ಪಿದ್ದಾರೆ. ಅಪಘಾತದ ಭೀಕರ ದೃಶ್ಯ ಅಲ್ಲಿಯೇ ಇದ್ದ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಸದ್ಯ ಬೆಳಗಾವಿ ಉತ್ತರ ಸಂಚಾರಿ ಪೊಲೀಸರು ಅಪಘಾತ ಮಾಡಿದ ಲಾರಿ, ಲಾರಿ ಚಾಲಕನನ್ನ ವಶಕ್ಕೆ ಪಡೆದಿದ್ದು, ಅಪರಿಚಿತ ಭಿಕ್ಷುನ ಗುರುತು ಪತ್ತೆ ಹಚ್ಚುತ್ತಿದ್ದಾರೆ.

## ಪ್ರೇಯಸಿಯೊಂದಿಗೆ ಲಾಡ್ಜ್‌ನಲ್ಲಿ ಸಿಕ್ಕಬಿದ್ದ ಪತಿರಾಯ




**ಬೆಳಗಾವಿ:** 'ಪ್ರೇಯಸಿ'ಯೊಂದಿಗೆ ಲಾಡ್ಜ್‌ನಲ್ಲಿದ್ದ ಪತಿಯನ್ನು ರಸ್ತೆಗೆ ಎಳೆದು ಚಪ್ಪಲಿಯಿಂದ ಥಳಿಸಿರುವ ಘಟನೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನಲ್ಲಿ ನಡೆದಿದೆ. ಈ ಘಟನೆಯಲ್ಲಿ ಪತಿ ಅವಿನಾಶ್ ಭೋಸಲೆಗೆ ಪತ್ನಿ ಮತ್ತು ಮಾವನಿಂದ ಥಳಿಸಲಾಗಿದೆ. ಚಿಕ್ಕೋಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಈ ಘಟನೆಯು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಅವಿನಾಶ್ ಭೋಸಲೆ ಎಂಬುವವರು ಚಿಕ್ಕೋಡಿ ಪಟ್ಟಣದ ನಿವಾಸಿ. ಅವರು ತಮ್ಮ ಪ್ರೇಯಸಿಯೊಂದಿಗೆ ಲಾಡ್ಜ್‌ನಲ್ಲಿ ಸಮಯ ಕಳೆಯುತ್ತಿದ್ದರು. ಆದರೆ, ಪತ್ನಿಗೆ ಈ ಬಗ್ಗೆ ಸುಳಿವು ಸಿಕ್ಕಿದ್ದು, ಅವರು ತಕ್ಷಣ ಲಾಡ್ಜ್‌ಗೆ ಧಾವಿಸಿ ಬಂದರು. ಮಾವನೊಂದಿಗೆ ಬಂದ ಪತ್ನಿ, ಲಾಡ್ಜ್ ರೂಂನ ದ್ವಾರವನ್ನು ತೆರೆದುಕೊಂಡು ಪತಿಯನ್ನು ಹೊರಗೆ ಎಳೆದುಕೊಂಡು ಬಂದರು. ರಸ್ತೆಯಲ್ಲೇ ಚಪ್ಪಲಿಯಿಂದ ಹೊಡೆದು ಗದರಿಸಿದ್ದಾರೆ. ಅವರು ಪತಿಯನ್ನು ಉಳ್ಳಾಡಿಸಿ, ಚಪ್ಪಲಿಯಿಂದ ಹಲವು ಬಾರಿ ಹೊಡೆದರು. ಮಾವನೂ ಸಹ ಪತಿಗೆ ಥಳಿಸಿದ್ದಾರೆ.

ಅವಿನಾಶ್ ಭೋಸಲೆ ಅವರು ಸಾಮಾನ್ಯ ಕೆಲಸಗಾರರಾಗಿದ್ದು, ಕುಟುಂಬದ ಜವಾಬ್ದಾರಿಗಳನ್ನು ನಿರ್ವಹಿಸುತ್ತಿದ್ದರು. ಆದರೆ, ಪ್ರೇಯಸಿಯೊಂದಿಗಿನ ಸಂಬಂಧವು ಈ ಘಟನೆಗೆ ಕಾರಣವಾಗಿದೆ. ಪತ್ನಿ ಅವರಿಗೆ ಈ ಬಗ್ಗೆ ಮೊದಲೇ ಅನುಮಾನವಿತ್ತು ಎಂದು ಹೇಳಲಾಗುತ್ತಿದೆ. ಅವರು ಮಾವನೊಂದಿಗೆ ಯೋಜನೆ ಮಾಡಿ ಲಾಡ್ಜ್‌ಗೆ ಬಂದಿದ್ದರು. ಘಟನೆ ನಡೆದ ಸಮಯದಲ್ಲಿ ಬಸ್ ನಿಲ್ದಾಣದ ಬಳಿ ಹಲವು ಜನರು ಸೇರಿದ್ದರು. ಕೆಲವರು ವೀಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದಾರೆ.

ಚಿಕ್ಕೋಡಿ ಪೊಲೀಸ್ ಠಾಣೆಯ ಅಧಿಕಾರಿಗಳು ಘಟನೆಯ ಬಗ್ಗೆ ತನಿಖೆ ಆರಂಭಿಸಿದ್ದಾರೆ. ಅವರು ಪತ್ನಿ ಮತ್ತು ಪತಿಯನ್ನು ವಿಚಾರಣೆಗೆ ಕರೆದಿದ್ದಾರೆ. ಘಟನೆಯಲ್ಲಿ ಯಾವುದೇ ಗಾಯಗಳು ಆಗಿಲ್ಲ ಎಂದು ತಿಳಿದುಬಂದಿದೆ. ಪ್ರೇಯಸಿ ಅವರು ಘಟನಾ ಸ್ಥಳದಿಂದ ಓಡಿಹೋಗಿದ್ದಾರೆ ಎಂದು ಹೇಳಲಾಗುತ್ತಿದೆ. ಪೊಲೀಸರು ಅವರನ್ನು ಹುಡುಕುತ್ತಿದ್ದಾರೆ.

## ಬ್ರೆಜಿಲ್ ಮೂಲದ ಮಾಡೆಲ್ ಮೇಲೆ ಲೈಂಗಿಕ ದೌರ್ಜನ್ಯ ಆರೋಪ



**ಬೆಂಗಳೂರು:** ಬ್ರೆಜಿಲ್ ಮೂಲದ ಮಾಡೆಲ್ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ ಆರೋಪ ಮೇಲೆ ಡೆಲಿವರಿ ಬಾಯ್‌ನನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ.

ಬಂಧಿತ ಆರೋಪಿಯನ್ನು ಕುಮಾರ್ ರಾವ್ ಎಂದು ಗುರುತಿಸಲಾಗಿದ್ದು, ಖಾಸಗಿ ಕಾಲೇಜಿನಲ್ಲಿ ಡಿಪ್ಲೋಮಾ ವ್ಯಾಸಂಗ ಮಾಡ್ತಿದ್ದ ಎಂದು ತಿಳಿದುಬಂದಿದೆ.

ಈ ಸಂಬಂಧ ಸಂತ್ರಸ್ತೆ ಆರ್‌ಟಿ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಮನೆಯಲ್ಲಿ ಒಬ್ಬಂಟಿಯಾಗಿರುವುದನ್ನು ಗಮನಿಸಿದ ನಂತರ ಡೆಲಿವರಿ ಬಾಯ್ ತನ್ನೊಂದಿಗೆ ಕೆಟ್ಟದಾಗಿ ವರ್ತಿಸಿ, ಅನುಚಿತವಾಗಿ ಮುಟ್ಟಿದ್ದಾನೆ ಎಂದು ಆರೋಪಿಸಿದ್ದಾರೆ.

ಅ.17ರಂದು ಬ್ರೆಜಿಲ್ ಮೂಲದ ಮಾಡೆಲ್ ಆ್ಯಪ್ ಒಂದರಲ್ಲಿ ದಿನಸಿ ವಸ್ತುಗಳನ್ನು ಆರ್ಡರ್ ಮಾಡಿದ್ದರು. ಈ ವೇಳೆ ದಿನಸಿ ತಂದ ಡೆಲಿವರಿ ಬಾಯ್ ಮನೆಯಲ್ಲಿ ಯಾರೂ ಇಲ್ಲದ್ದನ್ನು ಗಮನಿಸಿ, ಮಾಡೆಲ್ ಜೊತೆ ಅನುಚಿತ ವರ್ತನೆ ತೋರಿದ್ದಾನೆ. ಆಕೆಯನ್ನು ಮಾತಿಗೆಳೆದು ಆಕೆಯ ಮೈ ಮುಟ್ಟಲು ಯತ್ನಿಸಿದ್ದಾನೆ. ಇದರಿಂದ ಆತಂಕಕ್ಕೀಡಾದ ಮಾಡೆಲ್ ಕಿರುಚಿಕೊಂಡು ಬಾಗಿಲು ಲಾಕ್ ಮಾಡಿದ್ದಾರೆ.

ಕೂಡಲೇ ಡೆಲಿವರಿ ಬಾಯ್ ಅಲ್ಲಿಂದ ಪರಾರಿಯಾಗಿದ್ದಾನೆ. ಬಳಿಕ ಮಾಡೆಲ್ ತಾನು ಕೆಲಸ ಮಾಡುವ ಕಂಪನಿಗೆ ಮಾಹಿತಿ ನೀಡಿದ್ದು, ಅವರ ಸಹಾಯದಿಂದ ಆರ್‌ಟಿ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಸಂತ್ರಸ್ತೆ ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಆತ ಕೆಲಸ ಮಾಡುತ್ತಿದ್ದ ಕಂಪನಿ ಕೂಡ ಆತನನ್ನು ಕೆಲಸದಿಂದ ವಜಾಗೊಳಿಸಿರುವುದಾಗಿ ಹೇಳಿದ್ದು, ತನಿಖೆಗೆ ಸಹಕರಿಸುವುದಾಗಿ ಹೇಳಿದೆ ಎನ್ನಲಾಗಿದೆ.

## ಪುರುಷ ಆಯೋಗ ರಚಿಸಿ ಆನಂದ್ ಸಿ ತಿರುಮಲ



**ಬೆಂಗಳೂರು:** ಇತ್ತೀಚಿನ ದಿನಗಳಲ್ಲಿ ಕೌಟುಂಬಿಕ ಕಲಹಗಳು ಮತ್ತು ಕಾನೂನು ದುರುಪಯೋಗದ ಪರಿಣಾಮವಾಗಿ ಪುರುಷರು ಮಾನಸಿಕ ಖಿನ್ನತೆಗೊಳಗಾಗಿ ಆತ್ಮಹತ್ಯೆಗೆ ಶರಣಾಗುತ್ತಿರುವ ಪ್ರಕರಣಗಳು ಆತಂಕಕಾರಿಯಾಗಿ ಹೆಚ್ಚುತ್ತಿವೆ. ಈ ಗಂಭೀರ ಸ್ಥಿತಿಗತಿ ನಿವಾರಣೆಗೆ ಕರ್ನಾಟಕದಲ್ಲಿ ಪುರುಷರ ಹಕ್ಕು ರಕ್ಷಣೆಗೆ ಪ್ರತ್ಯೇಕ ಆಯೋಗವನ್ನು ರಚಿಸಬೇಕೆಂದು ಕರ್ನಾಟಕ ರಾಜ್ಯ ಪುರುಷ ಆಯೋಗ ರಚನಾ ಸಮಿತಿ ಅಧ್ಯಕ್ಷ ಆನಂದ್ ಸಿ ತಿರುಮಲ ಒತ್ತಾಯಿಸಿದ್ದಾರೆ.

ಇಂದು ಬೆಂಗಳೂರಿನಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, "ಮಹಿಳೆಯರಿಗಾಗಿ ಅನೇಕ ಕಾನೂನುಗಳು ಮತ್ತು ಆಯೋಗಗಳು ಕಾರ್ಯನಿರ್ವಹಿಸುತ್ತಿವೆ. ಆದರೆ, ಪುರುಷರ ಪರವಾಗಿ ಮಾತನಾಡುವ ಅಥವಾ ಅವರ ಅಹವಾಲು ಕೇಳುವ ಯಾವುದೇ ಅಧಿಕೃತ ವೇದಿಕೆ ಇಲ್ಲ. ಈ ಖಾಲಿ ಸ್ಥಳವನ್ನು ತುಂಬಲು ಸರ್ಕಾರವು ಶೀಘ್ರದಲ್ಲೇ ಪುರುಷ ಆಯೋಗವನ್ನು ರಚಿಸಬೇಕು," ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ಆನಂದ್ ತಿರುಮಲ ಅವರು ಮುಂದುವರೆದು ಹೇಳಿದರು: "ಇತ್ತೀಚಿನ ಕಾಲದಲ್ಲಿ ಕೆಲ ಮಹಿಳೆಯರು ಕೌಟುಂಬಿಕ ದೌರ್ಜನ್ಯ ಕಾಯಿದೆ (Domestic Violence Act) ಹಾಗೂ ವರದಕ್ಷಿಣೆ ನಿಷೇಧ ಕಾಯಿದೆಗಳಂತಹ ಕಾನೂನುಗಳನ್ನು ದುರುಪಯೋಗಪಡಿಸಿಕೊಂಡು, ತಮ್ಮ ಗಂಡಂದಿರ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ. ಇಂತಹ ಆರೋಪಗಳಿಂದ ಅಮಾಯಕ ಪುರುಷರು ಮಾನಸಿಕ, ಆರ್ಥಿಕ ಮತ್ತು ಸಾಮಾಜಿಕವಾಗಿ ಕುಗ್ಗುತ್ತಿದ್ದಾರೆ. ಕೆಲವರು ಈ ಒತ್ತಡವನ್ನು ತಾಳಲಾರದೆ ಆತ್ಮಹತ್ಯೆಗೈಯುತ್ತಿದ್ದಾರೆ. ಇದು ಒಂದು ಗಂಭೀರ ಸಾಮಾಜಿಕ ಸಮಸ್ಯೆಯಾಗಿದೆ," ಎಂದು ಹೇಳಿದರು.

ಅವರು ಆರೋಪಿಸಿದ್ದು, ಕೆಲ ಸಂದರ್ಭಗಳಲ್ಲಿ ಸ್ಥಳೀಯ ಮಹಿಳಾ ಸಂಘಟನೆಗಳು ಹಾಗೂ ರಾಜಕೀಯ ಪ್ರಭಾವವನ್ನು ಉಪಯೋಗಿಸಿ, ಪೊಲೀಸ್ ಠಾಣೆಗಳಲ್ಲಿ ಪುರುಷರ ವಿರುದ್ಧ ಸುಳ್ಳು ಪ್ರಕರಣಗಳನ್ನು ದಾಖಲಿಸುವ ಒತ್ತಡ ತರುತ್ತಿದ್ದಾರೆ. "ಪೊಲೀಸರಿಗೂ ಕೆಲವು ಸಂದರ್ಭಗಳಲ್ಲಿ ಒತ್ತಡದ ಕಾರಣದಿಂದಾಗಿ ಅಮಾಯಕ ಪುರುಷರನ್ನು ಬಂಧಿಸಲು ತೀವ್ರ ಒತ್ತಾಯ ಮಾಡಲಾಗುತ್ತಿದೆ. ಇದರ ಪರಿಣಾಮವಾಗಿ ನೂರಾರು ಕುಟುಂಬಗಳು ನಾಶವಾಗುತ್ತಿವೆ," ಎಂದು ಹೇಳಿದರು.

ಆನಂದ್ ಸಿ ತಿರುಮಲ ಅವರು ಪುರುಷರ ಪರವಾಗಿ ಕಾರ್ಯನಿರ್ವಹಿಸಲು ಮನೋವೈದ್ಯಕೀಯ ಸಲಹಾ ಕೇಂದ್ರಗಳು, ಕಾನೂನು ನೆರವು ಕಚೇರಿಗಳು, ಮತ್ತು ಪುರುಷರ ಸಹಾಯವಾಣಿ (Men's Helpline) ಸ್ಥಾಪಿಸಬೇಕೆಂದು ಸರ್ಕಾರವನ್ನು ವಿನಂತಿಸಿದರು. "ಪ್ರಸ್ತುತ ಮನಸೋ ಇಳಿವೆಯಾದ ಪುರುಷರಿಗೆ ಮಾತನಾಡಲು ಅಥವಾ ಸಹಾಯ ಕೇಳಲು ಯಾವುದೇ ವೇದಿಕೆ ಇಲ್ಲ. ಮಾನಸಿಕ ಆಘಾತದಿಂದ ಹೊರಬರಲು ಅವರಿಗೆ ಸಮಾಲೋಚನೆ ಅಗತ್ಯವಿದೆ," ಎಂದು ಅವರು ಹೇಳಿದರು.

ಅವರು ಸರ್ಕಾರದ ಗಮನ ಸೆಳೆಯುತ್ತಾ ಹೇಳಿದರು: "ಸಮಾಜವು ಮಹಿಳೆಯರು ಮಾತ್ರ ಶೋಷಿತರಾಗಿದ್ದಾರೆ ಎಂಬ ಧಾರಣೆಯನ್ನು ಬಿಟ್ಟು, ಪುರುಷರೂ ಕೂಡ ಶೋಷಣೆಯ ಬಲಿಯಾಗುತ್ತಿದ್ದಾರೆ ಎಂಬ ವಾಸ್ತವವನ್ನು ಅರಿತುಕೊಳ್ಳಬೇಕು. ಮನೆ, ಕಚೇರಿ, ಮತ್ತು ಸಾಮಾಜಿಕ ವಲಯಗಳಲ್ಲಿ ಕೆಲವು ಮಹಿಳೆಯರು ಪುರುಷರ ಸ್ವಾತಂತ್ರ್ಯವನ್ನು ಹಿಂಸಿಸುತ್ತಿದ್ದಾರೆ. ಈ ಮಾನಸಿಕ ಹಿಂಸೆ ತಡೆಯಲು ಸರ್ಕಾರದ ಮಧ್ಯಸ್ಥಿಕೆ ಅತ್ಯಾವಶ್ಯಕವಾಗಿದೆ."

ಆನಂದ್ ತಿರುಮಲ ಅವರ ಪ್ರಕಾರ, ಕಾನೂನಿನ ಅಡಿಯಲ್ಲಿ ಸಮಾನ ಹಕ್ಕುಗಳ ಕುರಿತ ಚರ್ಚೆ ನಡೆಯಬೇಕು. "ಮಹಿಳೆಯರ ಹಕ್ಕುಗಳು ಅಷ್ಟೇ ಮುಖ್ಯವಾದಂತೆ, ಪುರುಷರ ಮಾನಸಿಕ ಆರೋಗ್ಯ ಮತ್ತು ಅವರ ಗೌರವ ಕೂಡ ಅಷ್ಟೇ ಪ್ರಮುಖವಾಗಿದೆ. ಲಿಂಗ ಸಮಾನತೆ ಅಂದರೆ ಪುರುಷರ ಧ್ವನಿಯನ್ನೂ ಕೇಳಬೇಕು," ಎಂದು ಹೇಳಿದರು.

ಅವರು ಕೊನೆಯಲ್ಲಿ ಸರ್ಕಾರವನ್ನು ಮನವಿ ಮಾಡುತ್ತಾ, "ಮಹಿಳಾ ಆಯೋಗದ ಮಾದರಿಯಲ್ಲಿ ಪುರುಷ ಆಯೋಗವನ್ನು ಸ್ಥಾಪಿಸಿದರೆ, ಅನ್ಯಾಯಕ್ಕೊಳಗಾದ ಪುರುಷರಿಗೆ ನ್ಯಾಯ ಸಿಗಲು ವೇದಿಕೆ ಸಿಗುತ್ತದೆ. ಸಮಾಜದಲ್ಲಿ ಸಮಾನತೆ ಬರುವತ್ತ ಒಂದು ಹೆಜ್ಜೆಯಾದೀತು," ಎಂದು ಹೇಳಿದರು.

ಪುರುಷರು ತಮ್ಮ ನೋವನ್ನು ಹೇಳಿಕೊಳ್ಳಲು ಅನುಕೂಲವಾಗುವಂತೆ ರಾಜ್ಯ ದಲ್ಲಿ ಪುರುಷ ಆಯೋಗವನ್ನು ರಚಿಸುವ ತುಂಬಾ ಅಗತ್ಯ ಇದೆ. ಅನೇಕ ಪುರುಷರು ಕೌಟುಂಬಿಕ ದೌರ್ಜನ್ಯ ದಲ್ಲಿ ತಮ್ಮ ಹೆಂಡತಿ, ಮಕ್ಕಳಿಂದ ತೊಂದರೆಗೊಳಗಾದರೆ ಅದನ್ನು ಎಲ್ಲಿ ಪ್ರಶ್ನೆ ಮಾಡಬೇಕು ಪುರುಷ ಸಹಾಯವಾಣಿ ಅಗತ್ಯ ವಿದೆ ಎಂದು ಸರ್ಕಾರಕ್ಕೆ ಮನವಿ ಮಾಡಿಕೊಂಡರು.
ಅಧ್ಯಕ್ಷರು ಆನಂದ್ ಸಿ ತಿರುಮಲ ಕರ್ನಾಟಕ ರಾಜ್ಯ ಪುರುಷ ಆಯೋಗ ರಚನಾ

ವಿಶ್ವದ ನಾನಾ ದೇಶಗಳಲ್ಲಿ ಮುಂದಿನ ನವೆಂಬರ್ ತಿಂಗಳಲ್ಲಿ ಪುರುಷರ ದಿನವನ್ನು ಆಚರಿಸಲಾಗುತ್ತಿದೆ ಆದರೇ ನಮ್ಮ ರಾಜ್ಯ ಮತ್ತು ದೇಶದಲ್ಲಿ ಮಹಿಳಾ ಆಯೋಗ ರೀತಿಯಲ್ಲಿಯೇ ಪುರುಷರ ಆಯೋಗವೂ ರಚನೆಯಾಗಬೇಕು ಎಂದು ಸಮಿತಿ ಒತ್ತಾಯಿಸಿದೆ.

## ಪ್ರೀತಿ ಹೆಸರಲ್ಲಿ ಅತ್ಯಾಚಾರಕ್ಕೆ ಪ್ಲ್ಯಾನ್ ಬಾಲಕಿ ಕರೆದೊಯ್ಯುತ್ತಿದ್ದ ವೇಳೆ ನಡೆದಿದ್ದು ದುರಂತ

**ಬೆಂಗಳೂರು:** ಅತ್ಯಾಚಾರ ಎಸಗುವ ಉದ್ದೇಶದಿಂದ ಅಪ್ರಾಪ್ತೆಯನ್ನು ಬಲವಂತವಾಗಿ ಕರೆದೊಯ್ಯುವ ವೇಳೆ ಡಿವೈಡರ್‌ಗೆ ಬೈಕ್ ಡಿಕ್ಕಿಯಾಗಿ ಬಾಲಕಿ ಸ್ಥಳದಲ್ಲೇ ದುರ್ಮರಣ ಹೊಂದಿರುವ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ಪಟ್ಟಣ ಬಳಿ ನಡೆದಿದೆ. ಪ್ರೀತಿ ಹೆಸರಿನಲ್ಲಿ ಸರ್ಕಾರಿ ಶಾಲೆಯಲ್ಲಿ 9ನೇ ತರಗತಿ ಓದುತ್ತಿದ್ದ ಬಾಲಕಿ ಹಿಂದೆ ಬಿದ್ದಿದ್ದ ಅಜಯ್ ಎಂಬಾತ ತನ್ನ ಸಹಚರರ ಜೊತೆಗೂಡಿ ಬಾಲಕಿಯನ್ನ ಲೈಂಗಿಕವಾಗಿ ಬಳಸಿಕೊಳ್ಳಲು ಕರೆದೊಯ್ಯುತ್ತಿದ್ದ ಎನ್ನಲಾಗಿದೆ.

ಆರೋಪಿಗಳು ಒಟ್ಟು 2 ಬೈಕ್‌ನಲ್ಲಿ ತೆರಳಿದ್ದು, ಆ ಪೈಕಿ ಒಂದು ಬೈಕ್‌ನಲ್ಲಿ ಅಜಯ್, ಬಾಲಕಿ ಮತ್ತು ಇನ್ನೊಬ್ಬ ಇದ್ದ ಎನ್ನಲಾಗಿದೆ. ಹೊಸಕೋಟೆ ಮಾರ್ಗವಾಗಿ ಬಾಲಕಿಯನ್ನು ಕರೆದೊಯ್ಯುತ್ತಿದ್ದ ವೇಳೆ ಅಪಘಾತ ನಡೆದಿದ್ದು, ಈ ವೇಳೆ ಬಾಲಕಿ ಸಾವನ್ನಪ್ಪಿದ್ದಾಳೆ. ಬೈಕ್‌ನಲ್ಲಿದ್ದ ಉಳಿದ ಇಬ್ಬರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಅಕ್ಟೋಬರ್ 24ರಂದು ನಡೆದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಇನ್ನು ಶಾಲೆಗೆ ಹೋದ ಬಾಲಕಿ ಮನೆಗೆ ವಾಪಾಸ್ ಬಾರದೆ ಇದ್ದಾಗ ಪೋಷಕರು ಕಂಗಾಲಾಗಿದ್ದು,

ಈ ಬಗ್ಗೆ ಬನ್ನೇರುಘಟ್ಟ ಪೊಲೀಸ್ ಠಾಣೆಯಲ್ಲಿ ಕಿಡ್ನಾಪ್ ಕೇಸ್ ದಾಖಲಿಸಿದ್ದರು. ಅದೇ ದಿನ ಸಂಜೆ ಹೊಸಕೋಟೆ ಪೊಲೀಸರಿಂದ ಬಾಲಕಿ ಪೋಷಕರಿಗೆ ಕರೆ ಬಂದಿದ್ದು, ನಿಮ್ಮ ಮಗಳು ಅಪಘಾತದಲ್ಲಿ ಮೃತಪಟ್ಟಿದ್ದಾಳೆಂದು ಮಾಹಿತಿ ನೀಡಿದ್ದರು

ಬಲವಂತವಾಗಿ ಕರೆದೊಯ್ದು ಲೈಂಗಿಕವಾಗಿ ಬಳಸಿಕೊಳ್ಳಲು ಯತ್ನ ಆರೋಪ ಹಿನ್ನಲೆ ಅಜಯ್ ಅಲಿಯಾಸ್ ಮನೋಜ್, ಇರ್ಫಾನ್, ಮುಬಾರಕ್ ಸೇರಿ ಓರ್ವ ಅಪ್ರಾಪ್ತನನ್ನು ಪೊಲೀಸರು ಬಂಧಿಸಿದ್ದಾರೆ. ಅಪಹರಣ ಹಾಗೂ ಪೋಕ್ಸೋ ಪ್ರಕರಣದಡಿ ಆರೋಪಿಗಳನ್ನ ಅರೆಸ್ಟ್ ಮಾಡಲಾಗಿದ್ದು, ಬಂಧಿತರನ್ನ ಜೈಲಿಗೆ ಅಟ್ಟಲಾಗಿದೆ. ಬದುಕಿ ಬಾಳಬೇಕಿದ್ದ ಮಗಳನ್ನು ಕಳೆದುಕೊಂಡ ಪೋಷಕರ ಆಕ್ರಂದನ ಮುಗಿಲು ಮುಟ್ಟಿದೆ.

## ಕಸ ಎಸೆಯುವವರೇ ಎಚ್ಚರ ನಿಮ್ಮ ಮನೆ ಬಾಗಿಲಿಗೆ ವಾಪಸ್ ಬರಲಿದೆ ತ್ಯಾಜ್ಯ



**ಬೆಂಗಳೂರು:** ಈಗ ಕಸದ ಸಮಸ್ಯೆಯಿಂದ ಕಂಗಾಲಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆದು ನಿಯಮ ಉಲ್ಲಂಘಿಸುವವರ ವಿರುದ್ಧ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ನಿಯಮಿತ (BSWML) ಕಠಿಣ ಕ್ರಮಕ್ಕೆ ಮುಂದಾಗಿದೆ. ರಸ್ತೆಯಲ್ಲಿ ಕಸ ಎಸೆಯುವವರಿಗೆ ಒಂದು ವಿಶೇಷ 'ರಿಟರ್ನ್ ಗಿಫ್ಟ್' ಕೊಡಲು ಯೋಜನೆ ರೂಪಿಸಿದೆ.

ಕಡೆಯ ಅಸ್ತ್ರವಾಗಿ 'ರಿಟರ್ನ್ ಗಿಫ್ಟ್' ದಂಡ ವಿಧಿಸುವಿಕೆ, ಜಾಗೃತಿ ಅಭಿಯಾನಗಳು, ಮನೆ-ಮನೆ ಸಮೀಕ್ಷೆಗಳು ಇವೆಲ್ಲವೂ ಕಸದ ಸಮಸ್ಯೆಯನ್ನು ತಡೆಯಲು ವಿಫಲವಾದವು. ಈಗ BSWML‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕರೀಗೌಡ ಈ 'ಕಡೆಯ ಅಸ್ತ್ರ'ವನ್ನು ಪ್ರಯೋಗಿಸುವುದಾಗಿ ತಿಳಿಸಿದ್ದಾರೆ. "ಪದೇಪದೇ ಎಚ್ಚರಿಕೆ ನೀಡಿದರೂ ಕೆಲವರು ರಸ್ತೆಯಲ್ಲಿ ಕಸ ಸುರಿಯುತ್ತಿದ್ದಾರೆ. ಈ ಕ್ರಮ ಅವರಿಗೆ ಜವಾಬ್ದಾರಿಯ ಪಾಠ ಕಲಿಸುತ್ತದೆ," ಎಂದು ಅವರು ಹೇಳಿದ್ದಾರೆ. ಈ ಯೋಜನೆಯಡಿ, ನಿಯಮ ಉಲ್ಲಂಘಿಸುವವರ ಮನೆಗೆ ತ್ಯಾಜ್ಯವನ್ನು ವಾಪಸ್ ಕೊಡುವ ಮೂಲಕ ಸಂದೇಶ ಸಾರಲಾಗುತ್ತದೆ.

**ವಾರ್ಡ್ ಮಾರ್ಷಲ್‌ಗಳಿಗೆ ವಿಡಿಯೋ ದಾಖಲೆ ಜವಾಬ್ದಾರಿ**

ನಗರದ 198 ವಾರ್ಡ್‌ಗಳಲ್ಲಿ ನಿಯೋಜನೆಗೊಂಡಿರುವ ಮಾರ್ಷಲ್‌ಗಳಿಗೆ ಕಸ ಎಸೆಯುವವರನ್ನು ಗುರುತಿಸಿ, ವಿಡಿಯೋ ಸಾಕ್ಷ್ಯ ದಾಖಲಿಸುವ ಜವಾಬ್ದಾರಿ ವಹಿಸಲಾಗಿದೆ. ತಪ್ಪಿತಸ್ಥರನ್ನು ಪತ್ತೆಹಚ್ಚಿದ ನಂತರ, ಅವರ ಕಸವನ್ನು ಮನೆಗೆ ಮರಳಿ ಕೊಡಲಾಗುತ್ತದೆ. ಈ ಯೋಜನೆಯು ಮನೆ-ಮನೆ ಕಸ ಸಂಗ್ರಹ ವ್ಯವಸ್ಥೆ ಸಮರ್ಪಕವಾಗಿರುವ ಪ್ರದೇಶಗಳ 'ನಿಯಮ ಉಲ್ಲಂಘಿಸುವವರ' ಮೇಲೆ ಕೇಂದ್ರೀಕರಿಸಿದೆ.

ಕಸದ ಸಮಸ್ಯೆಗೆ ಕೇವಲ ಜನರ ನಿರ್ಲಕ್ಷ್ಯವೇ ಕಾರಣವಲ್ಲ. ವ್ಯವಸ್ಥೆಯಲ್ಲಿನ ದೋಷಗಳೂ ಇದಕ್ಕೆ ಕಾರಣ ಎಂದು ತಜ್ಞರು ಎಚ್ಚರಿಸಿದ್ದಾರೆ. ಹಲವೆಡೆ ಆಟೋ ಟಿಪ್ಪರ್‌ಗಳ ಕೊರತೆ, ಕಸ ಸಂಗ್ರಹದ ವೇಳಾಪಟ್ಟಿಯಲ್ಲಿನ ಏರುಪೇರು, ಮತ್ತು ಕಿರಿದಾದ ರಸ್ತೆಗಳಲ್ಲಿ ಕಸ ಸಂಗ್ರಹ ವಾಹನಗಳು ತಲುಪದಿರುವುದು ಸಮಸ್ಯೆಗೆ ಕಾರಣವಾಗಿದೆ. ಈ ಸಮಸ್ಯೆಗಳನ್ನು ಸರಿಪಡಿಸದೇ ಜನರನ್ನು ದೂಷಿಸುವುದು ಸರಿಯಲ್ಲ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

**ತಪ್ಪಿತಸ್ಥರನ್ನು ಗುರುತಿಸುವ ಸವಾಲು**

ಕಸ ಎಸೆಯುವವರನ್ನು ಗುರ್ತಿಸುವುದು ಸುಲಭವಲ್ಲ. ರಾತ್ರಿ ವೇಳೆಯಲ್ಲಿ ಅಥವಾ ಚಲಿಸುವ ವಾಹನಗಳಿಂದ ಕಸ ಎಸೆಯುವುದರಿಂದ ತಪ್ಪಿತಸ್ಥರನ್ನು ಪತ್ತೆಹಚ್ಚುವುದು ಕಷ್ಟಕರವಾಗಿದೆ. ಆದರೂ, ಪ್ರತಿ ವಾರ್ಡ್‌ನಲ್ಲಿ ಕನಿಷ್ಠ ಒಬ್ಬ 'ನಿರಂತರ ಕಸ ಎಸೆಯುವವನನ್ನು' ಗುರ್ತಿಸಲಾಗಿದೆ ಎಂದು BSWML ತಿಳಿಸಿದೆ.

### ಹುಲಿ ದಾಳಿಯ ಭೀತಿ; ಅರಣ್ಯ ಇಲಾಖೆ ಸಿಬ್ಬಂದಿ ಸೆಕ್ಯುರಿಟಿ

**ಚಾಮರಾಜನಗರ:** ಜಿಲ್ಲೆಯಲ್ಲಿ ಹುಲಿ ದಾಳಿಯ ಭೀತಿ ಎದುರಾಗಿದೆ. ಈ ಹಿನ್ನೆಲೆ ರೈತರ ಜಮೀನುಗಳಲ್ಲಿ ಅರಣ್ಯ ಇಲಾಖೆ ಸೆಕ್ಯುರಿಟಿ ವ್ಯವಸ್ಥೆ ಮಾಡುತ್ತಿದೆ.

ಉಳುಮೆ ಮಾಡಲು, ಫಸಲು ಕೊಯ್ಲು ಮಾಡಲು, ಜಮೀನುಗಳಲ್ಲಿ ಕೆಲಸ ಮಾಡಲು ರೈತರಿಗೆ ಅರಣ್ಯ ಇಲಾಖೆಯಿಂದ ಸೆಕ್ಯುರಿಟಿ ಕೊಡಲಾಗಿದೆ. ಚಾಮರಾಜನಗರ ತಾಲೂಕು ಕಲ್ಪುರ ಸುತ್ತಮುತ್ತ ಭಾರಿ ಗಾತ್ರದ ಹುಲಿ ಕಾಣಿಸಿಕೊಂಡಿತ್ತು.

ಈಗಾಗಲೇ ಎರಡು ಹಸುಗಳನ್ನು ಬಲಿ ಪಡೆದಿತ್ತು. ಜಮೀನುಗಳಿಗೆ ಹೋಗಲು ರೈತರು, ಕೃಷಿ ಕಾರ್ಮಿಕರ ಹಿಂದೇಟು ಹಾಕುತ್ತಿದ್ದಾರೆ. ಹೀಗಾಗಿ ಉಳುಮೆ ಮಾಡಲು, ಬೆಳೆ ಕೊಯ್ಲು ಮಾಡಲು ರೈತರಿಗೆ ಅರಣ್ಯ ಸಿಬ್ಬಂದಿ ಕಾವಲು ಮಾಡ್ತಿದ್ದಾರೆ. ಅರಣ್ಯ ಸಿಬ್ಬಂದಿಯ ಕಾವಲಿನಲ್ಲಿ ಕೃಷಿ ಚಟುವಟಿಕೆ ನಡೆಯುತ್ತಿದೆ

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ ಉದ್ಘಾಟನೆಗೊಳ್ಳಲಿದ್ದು, ಸರ್ವರಿಗೂ ಆತ್ಮೀಯ ಆಮಂತ್ರಣ**

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಕಾರವಾರದಲ್ಲಿ 1 ಕೋಟಿ ರೂ. ದಾಖಲೆ ರಹಿತ ಹಣ ಸಾಗಾಟ



**ಕಾರವಾರ**: ಖಾಸಗಿ ಬಸ್‌ನಲ್ಲಿ ದಾಖಲೆ ಇಲ್ಲದೆ ಗೋವಾದಿಂದ ಬೆಂಗಳೂರಿಗೆ ದಾಖಲೆ ಇಲ್ಲದೇ ಒಂದು ಕೋಟಿ ಹಣ ಇಬ್ಬರನ್ನು ಪೊಲೀಸರು ವಶಕ್ಕೆ ಪಡೆದ ಘಟನೆ ಉತ್ತರ ಕನ್ನಡ ಜಿಲ್ಲೆಯ ಕಾರವಾರ-ಗೋವಾ ಗಡಿಯ ಮಾಜಾಳಿ ಚೆಕ್ ಪೋಸ್ಟ್ ಬಳಿ ನಡೆದಿದೆ.

ಗೋವಾದಿಂದ(goa) ಬೆಂಗಳೂರಿನ ಹೊಸೂರಿಗೆ 1 ಕೋಟಿ ಹಣವನ್ನು ಸಾಗಾಟ ಮಾಡಲಾಗುತ್ತಿತ್ತು. ಚೆಕ್‌ಪೋಸ್ಟ್ ಬಳಿ ಪೊಲೀಸರು ತಪಾಸಣೆ ನಡೆಸುವ ವೇಳೆ ಚೀಲದಲ್ಲಿ ಹಣ ಪತ್ತೆಯಾಗಿದೆ. ಹಣದ ಸಂಬಂಧ ದಾಖಲೆ ಕೇಳಿದಾಗ ನೀಡದ ಕಾರಣ ಬೆಂಗಳೂರು ಮೂಲದ ಕಲ್ಪೇಶ, ರಾಜಸ್ಥಾನ ಮೂಲದ ಬಮರ ರಾಮ್ ಎಂಬ ಇಬ್ಬರನ್ನು ವಶಕ್ಕೆ ಪಡೆದು ತನಿಖೆ ಕೈಕೊಳ್ಳಲಾಗಿದೆ.

ಪ್ರಾಥಮಿಕ ಮಾಹಿತಿ ಪ್ರಕಾರ ಬೆಂಗಳೂರಿನ ಕಲ್ಪೇಶ್ ಹಾಗೂ ಬಮರ ರಾಮ್ ಗೋವಾದ ಬೇರೆಯೊಬ್ಬರ ಹಣವನ್ನು ವ್ಯವಹಾರಕ್ಕಾಗಿ ಬೆಂಗಳೂರಿಗೆ ತೆಗೆದುಕೊಂಡು ಹೋಗುತ್ತಿರುವುದಾಗಿ ಹೇಳಿದ್ದಾನೆ. ಆದರೆ ಈ ಹಣದ ಮೂಲ ದಾಖಲೆಗಳನ್ನು ಪೊಲೀಸರು ಕೇಳಿದಾಗ ನೀಡಿಲ್ಲ. ಚಿತ್ತಾಕುಲ ಪೊಲೀಸರು ಹಣವನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ.

## ಪಶ್ಚಿಮ ಟರ್ಕಿಯಲ್ಲಿ 6.1 ತೀವ್ರತೆಯ ಪ್ರಬಲ ಭೂಕಂಪ



**ಅಂಕಾರಾ**: ಪಶ್ಚಿಮ ಟರ್ಕಿಯ ಬಲಿಕೇಸಿರ್ ಪ್ರಾಂತ್ಯದ ಸಿಂದಿರ್ಗಿ ಪಟ್ಟಣದಲ್ಲಿ 6.1 ತೀವ್ರತೆಯ ಭೂಕಂಪ ಸಂಭವಿಸಿದ್ದು, ಪರಿಣಾಮ ಕಟ್ಟಡಗಳು ನೆಲಸಮಗೊಂಡಿವೆ.

ಸೋಮವಾರ (ಅ.27) ಪಶ್ಚಿಮ ಟರ್ಕಿಯಲ್ಲಿ ಸಂಭವಿಸಿದ್ದ ಭೂಕಂಪದಿಂದಾಗಿ ಮೂರು ಕಟ್ಟಡಗಳು ನೆಲಸಮಗೊಂಡಿದ್ದು, ಜನರು ಭಯದಿಂದ ಮನೆಯಿಂದಾಚೆ ಓಡಿಹೋಗಿದ್ದಾರೆ. ಕಳೆದ ಬಾರಿ ಸಂಭವಿಸಿದ್ದ ಭೂಕಂಪದಿಂದಾಗಿ ದುರ್ಬಲಗೊಂಡಿದ್ದ ಮೂರು ಕಟ್ಟಡಗಳು ಹಾಗೂ ಎರಡು ಅಂತಸ್ತಿನ ಅಂಗಡಿ ನೆಲಸಮಗೊಂಡಿದ್ದು.

ಯಾವುದೇ ಸಾವು-ನೋವು ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ ವಿಪತ್ತು ಮತ್ತು ತುರ್ತು ನಿರ್ವಹಣಾ ಪ್ರಾಧಿಕಾರದ ಮಾಹಿತಿ ಪ್ರಕಾರ, ಬಾಲಿಕೇಸಿರ್ ಪ್ರಾಂತ್ಯದ ಸಿಂದಿರ್ಗಿ ಪಟ್ಟಣದಲ್ಲಿ ಭೂಕಂಪದ ಕೇಂದ್ರ ಬಿಂದು ದಾಖಲಾಗಿದೆ. ಸ್ಥಳೀಯ ಸಮಯ ರಾತ್ರಿ 10:48ರ ಸುಮಾರಿಗೆ ಸುಮಾರು 6 ಕಿ.ಮೀ ಆಳದಲ್ಲಿ ಭೂಕಂಪ ಸಂಭವಿಸಿದೆ ಎಂದು ತಿಳಿಸಿದೆ.

ಟರ್ಕಿಯಲ್ಲಿ ಸಂಭವಿಸಿದ ಭೂಕಂಪದಿಂದಾಗಿ ಇಸ್ತಾನ್‌ಬುಲ್, ಬುರ್ಸಾ, ಮನಿಸಾ, ಇಜ್ಮಿರ್ ಸೇರಿದಂತೆ ಹತ್ತಿರದ ಪ್ರಾಂತ್ಯಗಳಲ್ಲಿ ಭೂಮಿ ಕಂಪಿಸಿದೆ

## ಕರ್ನಾಟಕ, ಆಂಧ್ರ, ತೆಲಂಗಾಣದ ಗಡಿಜಿಲ್ಲೆಗಳಲ್ಲಿ ವರುಣಾರ್ಭಟ



**ನವದೆಹಲಿ**:ಬಂಗಾಳಕೊಲ್ಲಿಯಲ್ಲಿ ಮೊಂಥಾ ಚಂಡಮಾರುತದ ಪರಿಣಾಮ ಕರ್ನಾಟಕ, ಆಂಧ್ರ, ತೆಲಂಗಾಣದ ಗಡಿ ಜಿಲ್ಲೆಗಳಲ್ಲಿ ವರುಣ ಅಬ್ಬರಿಸಲಿದ್ದಾನೆ ಎಂದು ಹವಾಮಾನ ಇಲಾಖೆ (IMD) ಮುನ್ಸೂಚನೆ ನೀಡಿದೆ.

ಆಂಧ್ರಪ್ರದೇಶ ಹಾಗೂ ಒಡಿಶಾದ ಕರಾವಳಿಯತ್ತ ಚಂಡಮಾರುತ ಮುನ್ನುಗ್ಗುತ್ತಿರುವ ಹಿನ್ನೆಲೆ ದೇಶದ ವಿವಿಧೆಡೆ ಅ.28 ಹಾಗೂ ಅ.29ರಂದು ವ್ಯಾಪಕ ಮಳೆಯಾಗಲಿದೆ. ಕರ್ನಾಟಕದ ಬಳ್ಳಾರಿ, ವಿಜಯನಗರ, ರಾಯಚೂರು, ಕೊಪ್ಪಳ, ಕಲಬುರಗಿ, ಬೀದರ್, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಹಾಸನ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಲಿದೆ. ಇನ್ನೂ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಚಂಡಮಾರುತದಿಂದಾಗಿ ಈಗಾಗಲೇ ಮೀನುಗಾರರಿಗೆ ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಮಂಗಳವಾರ (ಅ.28) ಬೆಂಗಳೂರಿನಿಂದ ಹೊರಡಲಿರುವ ಕೆಲವು ರೈಲು ಸೇವೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಚಂಡಮಾರುತದ ಪರಿಣಾಮ ಬೆಂಗಳೂರಿನಲ್ಲಿ ವಾತಾವರಣ ತಂಪಾಗಿದ್ದು, ಅಲ್ಲಲ್ಲಿ ಜಿಟಿಜಿಟಿ ಮಳೆಯಾಗುತ್ತಿದೆ. ನಗರದ SMVTಯಿಂದ ಹೊರಡುವ ಏಳು ರೈಲುಗಳ ವೇಳಾಪಟ್ಟಿಯಲ್ಲಿ ಬದಲಾವಣೆಯಾಗಿದ್ದು, ಹೊರಡುವ ಸಮಯಕ್ಕಿಂತ 12 ಗಂಟೆ ತಡವಾಗಿ ಹೊರಡಲಿವೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

ಆಂಧ್ರ ಕರಾವಳಿ ತೀರ ಪ್ರದೇಶಕ್ಕೆ ಉತ್ತರ-ವಾಯುವ್ಯ ದಿಕ್ಕಿನಲ್ಲಿ ಚಲಿಸುತ್ತಾ ಇಂದು ಸಂಜೆ ಅಥವಾ ರಾತ್ರಿಯ ವೇಳೆಗೆ ಆಂಧ್ರಪ್ರದೇಶದ ಮಚಲಿಪಟ್ಟಣ ಮತ್ತು ಕಳಿಂಗಪಟ್ಟಣ ನಡುವೆ, ಕಾಕಿನಾಡದ ಸುತ್ತಮುತ್ತಲಿನ ಕರಾವಳಿಯನ್ನು ದಾಟಲಿದೆ.

ಈ ಚಂಡಮಾರುತವು ಗಂಟೆಗೆ 90 ರಿಂದ 100 ಕಿ.ಮೀ ವೇಗದಲ್ಲಿ ಚಲಿಸುವ ಸಾಧ್ಯತೆಯಿದೆ. ಅಲ್ಲದೇ ಚಂಡಮಾರುತವು 2-4.6 ಮೀಟರ್ ಎತ್ತರದ ಅಲೆಗಳೊಂದಿಗೆ ಬಂದು ಅಪ್ಪಳಿಸಿದ್ದು, ಆಂಧ್ರದ 1,419 ಹಳ್ಳಿಗಳು ಮತ್ತು 44 ಪಟ್ಟಣಗಳ ಮೇಲೆ ಪರಿಣಾಮ ಬೀರುವ ನಿರೀಕ್ಷೆಯಿದೆ. ಜೊತೆಗೆ ಆಂಧ್ರಪ್ರದೇಶ, ಒಡಿಶಾ, ಪುದುಚೇರಿ, ತಮಿಳುನಾಡು ಮತ್ತು ಛತ್ತೀಸ್‌ಗಢಗಳಲ್ಲಿ ರಾಷ್ಟ್ರೀಯ ವಿಪತ್ತು ಪಡೆಯ 22 ತಂಡಗಳನ್ನು ಸರ್ಕಾರ ನಿಯೋಜಿಸಿದೆ.

ಈಗಾಗಲೇ ಆಂಧ್ರದ ಹಲವು ನಗರಗಳಲ್ಲಿ ಭಾರಿ ಮಳೆಯಾಗುತ್ತಿದ್ದು, ಪರಿಸ್ಥಿತಿ ಅಸ್ತವ್ಯಸ್ಥವಾಗಿದೆ. ಆಂಧ್ರಪ್ರದೇಶದ ಅನಕಾಪಲ್ಲಿ, ಕಾಕಿನಾಡ, ಕೋನಾಸೀಮಾ, ಶ್ರೀಕಾಕುಳಂ, ನೆಲ್ಲೂರು, ವಿಶಾಖಪಟ್ಟಣಂ, ತಿರುಪತಿ, ಪಶ್ಚಿಮ ಗೋದಾವರಿಯಲ್ಲಿ ಮುಂದಿನ 10 ದಿನಗಳಲ್ಲಿ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಈ ಹಿನ್ನೆಲೆ ಆಂಧ್ರಪ್ರದೇಶದ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದ್ದು, ಹಲವು ಗ್ರಾಮಗಳು ಜಲಾವೃತಗೊಂಡಿದ್ದು, ಜನರನ್ನು ನಿರಾಶ್ರಿತ ಕೇಂದ್ರಗಳಿಗೆ ಶಿಫ್ಟ್ ಮಾಡಲಾಗಿದೆ. ಇನ್ನೂ ಆಂಧ್ರಪ್ರದೇಶದ ಪೂರ್ವ ಕರಾವಳಿಯಲ್ಲಿ ಸಂಚರಿಸುವ 65 ರೈಲುಗಳ ಓಡಾಟ ಸ್ಥಗಿತಗೊಂಡಿದೆ.

ಮೊಂಥಾ ಚಂಡಮಾರುತದ ಹಿನ್ನೆಲೆ ಆಂಧ್ರ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ತಡರಾತ್ರಿ ರಾಜ್ಯದ ಪರಿಸ್ಥಿತಿಯನ್ನು ಪರಿಶೀಲಿಸಲು ವೀಡಿಯೋ ಕಾನ್ಫರೆನ್ಸ್ ಮೂಲಕ ಪರಿಶೀಲನಾ ಸಭೆ ನಡೆಸಿದ್ದು, ಯಾವುದೇ ಸಮಸ್ಯೆಯಾಗದಂತೆ ಎಚ್ಚರಿಕೆ ವಹಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಜನರಿಗೆ ಸ್ಪಂದಿಸಲು ಜಿಲ್ಲೆಗೊಬ್ಬರು ಅಧಿಕಾರಿಯನ್ನು ನೇಮಕ ಮಾಡಿ ಎಂದು ಸೂಚನೆ ನೀಡಿದ್ದಾರೆ.


## ಟಿಪ್ಪು ಅರಮನೆ ಮೇಲೆ ಬಿಷ್ಣೋಯ್ ಹೆಸರು: ಸುಮೋಟೋ ಕೇಸ್ ದಾಖಲು

**ಚಿಕ್ಕಬಳ್ಳಾಪುರ**: ಟಿಪ್ಪು ಅರಮನೆ ಮೇಲೆ ಬಿಷ್ಣೋಯ್ ಹೆಸರು ಬರೆದು ವಿಕೃತಿ ಪ್ರಕರಣ ಸಂಬಂಧ ಟಿವಿ9 ವರದಿ ಬೆನ್ನಲ್ಲೇ ನಂದಿಗಿರಿಧಾಮ ಪೊಲೀಸ್ ಠಾಣೆಯಲ್ಲಿ ಸುಮೋಟೋ ಕೇಸ್ ದಾಖಲಾಗಿದೆ. ನಂದಿಗಿರಿಧಾಮದಲ್ಲಿರುವ ಭಾರತೀಯ ಪುರಾತತ್ತ ಹಾಗೂ ಸರ್ವೇಕ್ಷಣ ಇಲಾಖೆ ಅಧೀನದ ಟಿಪ್ಪು ಸುಲ್ತಾನ್ ಸಮ್ಮರ್ ಪ್ಯಾಲೇಸ್ ಮೇಲೆ ಕುಖ್ಯಾತ ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯ್ ಹೆಸರನ್ನು ದೊಡ್ಡದಾಗಿ ಬರೆಯಲಾಗಿತ್ತು. ಇದರಿಂದ ಟಿಪ್ಪು ಸುಲ್ತಾನ್ ಅಭಿಮಾನಿಗಳು ಹಾಗೂ ಪ್ರವಾಸಿಗರು ಅಸಮಾಧಾನ ವ್ಯಕ್ತಪಡಿಸಿದ್ದರು.

ಚಿಕ್ಕಬಳ್ಳಾಪುರ, ಅಕ್ಟೋಬರ್ 28: ಟಿಪ್ಪು ಅರಮನೆ ಮೇಲೆ ಬಿಷ್ಣೋಯ್ (Lawrence Bishnoi) ಹೆಸರು ಬರೆದು ವಿಕೃತಿ ಪ್ರಕರಣ ಸಂಬಂಧ ಟಿವಿ9 ವರದಿ ಬೆನ್ನಲ್ಲೇ ನಂದಿಗಿರಿಧಾಮ ಪೊಲೀಸ್ ಠಾಣೆಯಲ್ಲಿ ಸುಮೋಟೋ ಕೇಸ್ ದಾಖಲಾಗಿದೆ. ನಂದಿಗಿರಿಧಾಮದಲ್ಲಿರುವ ಭಾರತೀಯ ಪುರಾತತ್ವ ಹಾಗೂ ಸರ್ವೇಕ್ಷಣ ಇಲಾಖೆ ಅಧೀನದ ಟಿಪ್ಪು ಸುಲ್ತಾನ್ ಸಮ್ಮರ್ ಪ್ಯಾಲೇಸ್ ಮೇಲೆ ಕುಖ್ಯಾತ ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯ್ ಹೆಸರನ್ನು ದೊಡ್ಡದಾಗಿ ಬರೆಯಲಾಗಿತ್ತು. ಇದರಿಂದ ಟಿಪ್ಪು ಸುಲ್ತಾನ್ ಅಭಿಮಾನಿಗಳು ಹಾಗೂ ಪ್ರವಾಸಿಗರು ಅಸಮಾಧಾನ ವ್ಯಕ್ತಪಡಿಸಿದ್ದರು.

ಟಿಪ್ಪು ಅರಮನೆ ಮೇಲೆ ದುಷ್ಕರ್ಮಿಗಳು ಬರೆದಿದ್ದ ಬರಹವನ್ನು ಪುರಾತತ್ವ ಹಾಗೂ ಸರ್ವೇಕ್ಷಣಾ ಇಲಾಖೆ ಸಿಬ್ಬಂದಿ ಅಳಿಸಿದ್ದಾರೆ. ಲಾರೆನ್ಸ್ ಬಿಷ್ಣೋಯ್ ಹೆಸರಿನ ಮೇಲೆ ಬಣ್ಣವನ್ನು ಬಳಿಯಲಾಗಿದೆ. ಘಟನೆ ಸಂಬಂಧ ಸ್ಥಳದಲ್ಲಿರುವ ಸಿಸಿ ಕ್ಯಾಮರಾಗಳ ಪರಿಶೀಲನೆಯನ್ನೂ ನಡೆಸಲಾಗುತ್ತಿದ್ದು, ಶೀಘ್ರ ಆರೋಪಿಗಳ ಪತ್ತೆ ಮಾಡಿ ಕಠಿಣ ಕ್ರಮದ ಭರವಸೆಯನ್ನು ಪೊಲೀಸರು ನೀಡಿದ್ದಾರೆ.

## ಪ್ರೇಯಸಿಗಾಗಿ 30 ಲಕ್ಷ ಮೌಲ್ಯದ ಐಫೋನ್ ದೋಚಿದ್ದ ಗ್ಯಾಂಗ್ ಅರೆಸ್ಟ್



**ಬೆಂಗಳೂರು**: ಪ್ರೇಯಸಿಗಾಗಿ ಕಳ್ಳತನಕ್ಕಿಳಿದು 30 ಲಕ್ಷ ರೂ. ಮೌಲ್ಯದ ಐಫೋನ್ ದೋಚಿದ್ದ ಗ್ಯಾಂಗ್‌ನ್ನು ಪೊಲೀಸರು ಬಂಧಿಸಿರುವ ಘಟನೆ ಬೆಂಗಳೂರಿನ ವರ್ತೂರಿನಲ್ಲಿ ನಡೆದಿದೆ.

ಬಂಧಿತರನ್ನು ದಿವಾಸ್ ಕಮಿ, ಆರೋಹನ್ ತಾಪಾ ಮತ್ತು ಅಸ್ಮಿತಾ ಎಂದು ಗುರುತಿಸಲಾಗಿದ್ದು, ಬಂಧಿತರಿಂದ 30 ಲಕ್ಷ ರೂ. ಮೌಲ್ಯದ ಐಫೋನ್ 17ನ ಮೊಬೈಲ್‌ಗಳನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.

ಪ್ರೇಯಸಿ ಅಸ್ಮಿತಾ ಗಂಡನನ್ನ ಬಿಟ್ಟು ಪ್ರಿಯತಮ ದಿವಾಸ್ ಜೊತೆ ಬೆಂಗಳೂರಿನ ವರ್ತೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳೆದ ಆರು ತಿಂಗಳಿಂದ ವಾಸವಾಗಿದ್ದರು. ಕಡಿಮೆ ಸಮಯದಲ್ಲಿ ದುಪ್ಪಟ್ಟು ಹಣ ಸಂಗ್ರಹಿಸಬೇಕೆಂಬ ಆಸೆಯಿಂದ ಕಳ್ಳತನಕ್ಕಿಳಿಯುವ ಪ್ಲ್ಯಾನ್ ಮಾಡಿದ್ದರು.

ಪ್ರಿಯತಮ ದಿವಾಸ್ ತನ್ನ ಸ್ನೇಹಿತ ಆರೋಹನ್ ತಾಪಾ ಜೊತೆ ಸೇರಿಕೊಂಡು ದೊಡ್ಡ ದೊಡ್ಡ ಮೊಬೈಲ್ ಶೋರೂಂಗಳಿಗೆ ಕನ್ನ ಹಾಕಲು ಯೋಜಿಸುತ್ತಾರೆ.

24 ಗಂಟೆಯೊಳಗೆ ವರ್ತೂರು ಪೊಲೀಸ್ ಠಾಣಾ ವ್ಯಾಪ್ತಿಯ ಒಂದೇ ಕಂಪನಿಯ ಎರಡು ಶೋರೂಂಗೆ ಕನ್ನ ಹಾಕಿದ್ದಾರೆ. ಶೋರೂಂ ಡೋರ್ ಒಡೆದು ಒಳನುಗ್ಗಿ ದುಬಾರಿ ಮೊಬೈಲ್‌ಗಳನ್ನು ದೋಚಿ, ಎಮರ್ಜೆನ್ಸಿ ಎಕ್ಸಿಟ್ ಮೂಲಕ ಹೊರಹೋಗುತ್ತಿದ್ದರು. ಬಳಿಕ ಕದ್ದ ಮೊಬೈಲ್‌ಗಳನ್ನು ಪ್ರೇಯಸಿ ಅಸ್ಮಿತಾ ಮಾರಾಟ ಮಾಡುತ್ತಿದ್ದಳು.

ಈ ಸಂಬಂಧ ವರ್ತೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿಗಳನ್ನು ಬಂಧಿಸಿದ್ದಾರೆ. ಬಂಧಿತ ಆರೋಪಿಗಳಿಂದ 30 ಲಕ್ಷ ರೂ. ಮೌಲ್ಯದ 25ಕ್ಕೂ ಅಧಿಕ ಮೊಬೈಲ್ ಹಾಗೂ ಒಂದು ವಾಚ್ ವಶಕ್ಕೆ ಪಡೆದಿದ್ದಾರೆ. ಸದ್ಯ ತನಿಖೆ ಮುಂದುವರೆದಿದೆ.

## ಸಿಎಂ ಬದಲಾವಣೆ ವಿಚಾರ: ಸಚಿವ ಚಲುವರಾಯಸ್ವಾಮಿ ಸ್ಫೋಟಕ ಹೇಳಿಕೆ



**ಮಂಡ್ಯ**: ಕರ್ನಾಟಕದ ರಾಜಕೀಯ ವಲಯದಲ್ಲಿ ಮುಖ್ಯಮಂತ್ರಿ (ಸಿಎಂ) ಬದಲಾವಣೆ ಕುರಿತ ಚರ್ಚೆಗಳು ತೀವ್ರಗೊಂಡಿರುವ ಬೆನ್ನಲ್ಲೇ, ಕೃಷಿ ಸಚಿವ ಚಲುವರಾಯಸ್ವಾಮಿ ಮಂಡ್ಯದಲ್ಲಿ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಸಂಪುಟ ಬದಲಾವಣೆಯಾಗಲಿ ಅಥವಾ ನಾಯಕತ್ವ ಬದಲಾವಣೆಯಾಗಲಿ, ಕಾಂಗ್ರೆಸ್ ಹೈಕಮಾಂಡ್ ಮತ್ತು ಶಾಸಕರ ನಡುವೆ ಒಮ್ಮತದ ತೀರ್ಮಾನವಾಗಲಿದೆ ಎಂದು ಅವರು ಪರೋಕ್ಷವಾಗಿ ಸಿಎಂ ಬದಲಾವಣೆಯ ಸುಳಿವು ನೀಡಿದ್ದಾರೆ.

ಅಕ್ಟೋಬರ್ 28, 2025 ರಂದು ಮಂಡ್ಯದಲ್ಲಿ ಮಾತನಾಡಿದ ಚಲುವರಾಯಸ್ವಾಮಿ, ನಮ್ಮ ಕಾಂಗ್ರೆಸ್ ಪಕ್ಷದಲ್ಲಿ ಶಾಸಕರಷ್ಟೇ ಮುಖ್ಯವಾದ ಹೈಕಮಾಂಡ್ ಕೂಡ ಪ್ರಮುಖ ಪಾತ್ರ ವಹಿಸುತ್ತದೆ. ಸಿಎಂ ಬದಲಾವಣೆಯಾಗಲಿ, ಸಂಪುಟ ಮರುರಚನೆಯಾಗಲಿ, ಎಲ್ಲವೂ ಒಳ್ಳೆಯ ರೀತಿಯಲ್ಲಿ, ಗೊಂದಲವಿಲ್ಲದೇ ತೀರ್ಮಾನವಾಗಲಿದೆ ಎಂದರು. \

ಸಚಿವರು ತಮ್ಮ ಹೇಳಿಕೆಯಲ್ಲಿ ಸಿಎಂ ಬದಲಾವಣೆಯ ಕುರಿತು ನಮ್ಮೊಂದಿಗೆ ಹೈಕಮಾಂಡ್ ಇನ್ನೂ ಚರ್ಚೆ ನಡೆಸಿಲ್ಲ. ಆದರೆ, ಈ ವಿಷಯದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ಮತ್ತು ಹೈಕಮಾಂಡ್ ಒಟ್ಟಿಗೆ ಕೂತು ಒಳ್ಳೆಯ ತೀರ್ಮಾನ ಕೈಗೊಳ್ಳಲಿದ್ದಾರೆ. ಇದು ಬಿಜೆಪಿಯಂತೆ ಗೊಂದಲದಿಂದ ಕೂಡಿರುವುದಿಲ್ಲ. ನಮ್ಮ ಪಕ್ಷದಲ್ಲಿ ಶಾಸಕರು ಮತ್ತು ಹೈಕಮಾಂಡ್ ಒಂದೇ ರೀತಿಯ ಮಹತ್ವವನ್ನು ಹೊಂದಿದ್ದಾರೆ ಎಂದು ಒತ್ತಿಹೇಳಿದರು.

ಚಲುವರಾಯಸ್ವಾಮಿ ಅವರು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರನ್ನು ಉಲ್ಲೇಖಿಸಿ ಪರಮೇಶ್ವರ್ ಅವರು ಕಾಂಗ್ರೆಸ್‌ನ ಹಿರಿಯ ನಾಯಕರು. ಅವರು ಕಾಂಗ್ರೆಸ್ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದ್ದಾರೆ. ಆದರೆ, ಸಿಎಂ ಬದಲಾವಣೆಯ ವಿಷಯದಲ್ಲಿ ಯಾವುದೇ ಚರ್ಚೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದರು. ಈ ಹೇಳಿಕೆಯಿಂದ, ಸಿಎಂ ಸ್ಥಾನಕ್ಕೆ ಪರಮೇಶ್ವರ್ ಅವರ ಹೆಸರು ಕೂಡ ಚರ್ಚೆಯಲ್ಲಿರುವ ಸಾಧ್ಯತೆಯನ್ನು ಊಹಿಸಲಾಗುತ್ತಿದೆ.

ಸಚಿವರು ಮಾತನಾಡುವಾಗ, ರೀ-ಷಫಲ್ ಆಗುತ್ತದೆಯೋ, ನಾಯಕತ್ವ ಬದಲಾವಣೆಯಾಗುತ್ತದೆಯೋ, ಏನಾಗುತ್ತದೆ, ಯಾವಾಗ ಆಗುತ್ತದೆ ಎಂಬುದು ಗೊತ್ತಿಲ್ಲ. ಆದರೆ, ಎಲ್ಲವೂ ಸುಗಮವಾಗಿ ನಡೆಯಲಿದೆ. ವಿರೋಧ ಪಕ್ಷದವರಿಗೆ ಖಾರವಾಗಿ ಏನೂ ಸಿಗದಂತೆ ತೀರ್ಮಾನವಾಗಲಿದೆ ಎಂದು ವಿರೋಧ ಪಕ್ಷವಾದ ಬಿಜೆಪಿಗೆ ಟಾಂಗ್ ನೀಡಿದರು.

ಬಿಹಾರ ವಿಧಾನಸಭೆ ಚುನಾವಣೆಯು ಮುಗಿದ ನಂತರ ಕಾಂಗ್ರೆಸ್ ಹೈಕಮಾಂಡ್ ಈ ವಿಷಯದ ಬಗ್ಗೆ ಗಂಭೀರ ಚರ್ಚೆ ನಡೆಸಲಿದೆ ಎಂದು ಚಲುವರಾಯಸ್ವಾಮಿ ಸೂಚಿಸಿದ್ದಾರೆ. ಹೈಕಮಾಂಡ್ ಈ ವಿಷಯವನ್ನು ಗೌಪ್ಯವಾಗಿರಿಸಿದೆ. ಬಿಹಾರ ಚುನಾವಣೆ ಮುಗಿದ ಬಳಿಕ, ಸಿಎಂ, ಡಿಸಿಎಂ, ಮತ್ತು ಹೈಕಮಾಂಡ್ ಒಟ್ಟಿಗೆ ಕೂತು ತೀರ್ಮಾನ ಕೈಗೊಳ್ಳಲಿದ್ದಾರೆ ಎಂದು ಹೇಳಿದ್ದಾರೆ.

## ಡಿ.ಕೆ ಶಿವಕುಮಾರ್ ಭೇಟಿ ಮಾಡಿದ ತೇಜಸ್ವಿ ಸೂರ್ಯ





**ಬೆಂಗಳೂರು**: ಬೆಂಗಳೂರಿನ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ರಾಜ್ಯ ಸರ್ಕಾರ ಯೋಜಿಸಿರುವ ಸುರಂಗ ರಸ್ತೆ (ಟನಲ್ ರಸ್ತೆ) ಯೋಜನೆಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ, ಇಂದು ಸದಾಶಿವನಗರದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿವಾಸದಲ್ಲಿ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದಾರೆ.

ರಾಜ್ಯ ಸರ್ಕಾರವು ಬೆಂಗಳೂರಿನ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಸುರಂಗ ರಸ್ತೆ ನಿರ್ಮಾಣಕ್ಕೆ ಮುಂದಾಗಿದೆ. ಈ ಯೋಜನೆಯು ನಗರದ ಸಂಚಾರ ಸಮಸ್ಯೆಗೆ ಒಂದು ಆಧುನಿಕ ಪರಿಹಾರವಾಗಿದೆ ಎಂದು ಸರ್ಕಾರ ಹೇಳಿದೆ. ಆದರೆ, ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಈ ಯೋಜನೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಇದರಿಂದ ಆಗಬಹುದಾದ ಸಮಸ್ಯೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿದ್ದಾರೆ.

ಈ ಯೋಜನೆಯ ವಿರುದ್ಧ ಕಾನೂನು ಕ್ರಮಕ್ಕೂ ಮುಂದಾಗಿರುವ ತೇಜಸ್ವಿ ಸೂರ್ಯ, ಕೋರ್ಟ್ ಮೆಟ್ಟಿಲೇರಿದ್ದಾರೆ. ಈ ಹಿನ್ನೆಲೆಯಲ್ಲಿ, ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಸಂಸದ ತೇಜಸ್ವಿ ಸೂರ್ಯ ಅವರಿಗೆ ತಮ್ಮನ್ನು ಭೇಟಿಯಾಗಿ ಚರ್ಚೆ ನಡೆಸುವಂತೆ ಆಹ್ವಾನ ನೀಡಿದ್ದರು. ಈ ಆಹ್ವಾನವನ್ನು ಒಪ್ಪಿಕೊಂಡ ತೇಜಸ್ವಿ ಸೂರ್ಯ, ಸದಾಶಿವನಗರದ ಡಿಸಿಎಂ ನಿವಾಸಕ್ಕೆ ಆಗಮಿಸಿ, ಟನಲ್ ರಸ್ತೆ ಯೋಜನೆಯ ಕುರಿತು ಸವಿವರವಾಗಿ ಚರ್ಚಿಸಿದರು. ತೇಜಸ್ವಿ ಸೂರ್ಯ ಅವರು ಈ ಯೋಜನೆಯಿಂದ ಪರಿಸರದ ಮೇಲೆ ಆಗಬಹುದಾದ ಪರಿಣಾಮ, ಭೂಮಿ ಸ್ವಾಧೀನದ ಸಮಸ್ಯೆಗಳು, ಮತ್ತು ಸ್ಥಳೀಯ ಜನರಿಗೆ ಉಂಟಾಗಬಹುದಾದ ತೊಂದರೆಗಳ ಬಗ್ಗೆ ತಮ್ಮ ಆಕ್ಷೇಪಗಳನ್ನು ಮಂಡಿಸಿದ್ದಾರೆ. ಈ ಯೋಜನೆಯು ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿದ್ದರೂ, ಇದರಿಂದ ದೀರ್ಘಕಾಲೀನ ಸಮಸ್ಯೆಗಳು ಉದ್ಭವಿಸಬಹುದು ಎಂದು ಹೇಳಿದ್ದಾರೆ. ಡಿ.ಕೆ. ಶಿವಕುಮಾರ್ ಅವರು ಈ ಭೇಟಿಯ ಸಂದರ್ಭದಲ್ಲಿ ಸಂಸದರ ಆಕ್ಷೇಪಗಳನ್ನು ಆಲಿಸಿದ್ದು, ಯೋಜನೆಯನ್ನು ಮುಂದುವರಿಸುವ ಮೊದಲು ಎಲ್ಲಾ ಆಕ್ಷೇಪಗಳನ್ನು ಪರಿಗಣಿಸುವ ಭರವಸೆ ನೀಡಿದ್ದಾರೆ.

## ಈ ಜೋಡಿಯ ಪ್ರೀತಿಯಲ್ಲಿ ಕರಗಿ ಹೋಯ್ತು ಕ್ಯಾನ್ಸರ್

ಚೀನಾದಲ್ಲಿ ವಿಚಿತ್ರ ಘಟನೆಗಳು ನಡೆಯುತ್ತಲೇ ಇರುತ್ತದೆ. ಹೊಸ ಹೊಸ ವಿಚಾರಗಳು ಹಾಗೂ ವಿಚಿತ್ರ ಸಂಗತಿಗಳಿಂದ ಸುದ್ದಿಯಾಗುತ್ತ ಇರುತ್ತದೆ. ಇದೀಗ ಸೋಶಿಯಲ್ ಮೀಡಿಯಾದಲ್ಲಿ ಚೀನಾದಲ್ಲಿ ನಡೆದ ವಿಚಿತ್ರ ಮದುವೆಯ ಬಗ್ಗೆ ವೈರಲ್ ಆಗಿದೆ. ಒಂದು ಒಪ್ಪಂದಕ್ಕಾಗಿ (China contract marriage) ಈ ಮದುವೆ ಮಾಡಿಕೊಂಡು ಕೊನೆಗೆ ಅದು ಇಬ್ಬರ ನಡುವೆ ಪ್ರೀತಿ ಹುಟ್ಟಲು ಕಾರಣವಾಗಿದೆ. ಅಷ್ಟಕ್ಕೂ ಆ ಒಪ್ಪಂದ ಏನು? ಇಲ್ಲಿದೆ ನೋಡಿ. ಚೀನಾದ ಯುವತಿಯೊಬ್ಬರು ಕ್ಯಾನ್ಸರ್ ನಿಂದ ಬಳಲುತ್ತಿರುವ ವ್ಯಕ್ತಿಯೊಬ್ಬರನ್ನು ವಿವಾಹವಾಗಿದ್ದಾರೆ. ಈ ವಿವಾಹ ಮಾಡಿಕೊಳ್ಳುವುದಕ್ಕೂ ಒಂದು ಒಪ್ಪಂದ ಮಾಡಿಕೊಂಡಿದ್ದಾರೆ. ಕ್ಯಾನ್ಸರ್‌ನಿಂದ ಬಳಲುತ್ತಿರುವ ಈ ವ್ಯಕ್ತಿ ಮರಣ ಹೊಂದಿದ ನಂತರ ಅವರ ಮೂತ್ರಪಿಂಡವನ್ನು ಈ ಯುವತಿಗೆ ನೀಡಬೇಕು. ಏಕೆಂದರೆ ಈ ಯುವತಿ ಯುರೇಮಿಯಾದಿಂದ ಬಳಲುತ್ತಿದ್ದಾರೆ. ಆದರೆ ಇದೀಗ ಈ ಒಪ್ಪಂದದ ಮದುವೆ ನಿಜವಾದ ಪ್ರೀತಿಗೆ ತಿರುಗಿದೆ. ಈ ಬಗ್ಗೆ ಸೌತ್ ಚೀನಾ ಮಾರ್ನಿಂಗ್ ಪೋಸ್ಟ್ ವರದಿ ಮಾಡಿದೆ.

ಮ್ಯಾರೇಜ್ ಅಂಡ್ ಫ್ಯಾಮಿಲಿ ಎಂಬ ನಿಯತಕಾಲಿಕೆ ಪ್ರಕಾರ, ಶಾಂಕ್ಸಿ ಪ್ರಾಂತ್ಯದ 24 ವರ್ಷದ ವಾಂಗ್ ಕ್ಸಿಯಾವೊ ಎಂಬ ಯುವತಿಗೆ ಯುರೇಮಿಯಾ ಇರುವುದು ಪತ್ತೆಯಾಯಿತು. ಇದನ್ನು ಸರಿಯಾಗಬೇಕಾದರೆ ಮೂತ್ರಪಿಂಡವನ್ನು ಕಸಿ ಮಾಡಬೇಕು. ಒಂದು ವೇಳೆ ಮಾಡದಿದ್ದರೆ ಅವರು ಒಂದು ವರ್ಷದೊಳಗೆ ಸಾವನ್ನಪ್ಪುತ್ತಾರೆ ಎಂದು ವೈದ್ಯರು ಹೇಳಿದ್ದಾರೆ. ಇನ್ನು ಈ ಯುವತಿಯ ಕುಟುಂಬದಲ್ಲಿ ಇವರಿಗೆ ಹೊಂದಾಣಿಕೆ ಆಗುವ ಮೂತ್ರಪಿಂಡ ಸಿಗಲಿಲ್ಲ, ಇದೇ ವೇಳೆ ಪೇಪರ್‌ನಲ್ಲಿ ಒಂದು ಜಾಹೀರಾತು ಬಂದಿತ್ತು, ನಾನು ಕ್ಯಾನ್ಸರ್ ವ್ಯಕ್ತಿ ನನ್ನನ್ನು ಮದುವೆಯಾದರೆ ಹಣ ಹಾಗೂ ನನ್ನ ಆಸ್ತಿಯನ್ನು ನೀಡುತ್ತೇನೆ ಎಂದು ಜಾಹೀರಾತು ನೀಡಿದ್ದರು. ಇದನ್ನು ನೋಡಿ ವಾಂಗ್ ಕ್ಸಿಯಾವೊ ಅವರು ಆ ವ್ಯಕ್ತಿಯನ್ನು ಸಂಪರ್ಕಿಸಿ ಒಪ್ಪಂದವನ್ನು ಮಾಡಿಕೊಂಡಿದ್ದಾರೆ. ನಿಮ್ಮ ಸಾವಿನ ನಂತರ ನನಗೆ ಮೂತ್ರಪಿಂಡವನ್ನು ದಾನ ಮಾಡಬೇಕು ಎಂದು. ಇದಕ್ಕೆ ಒಪ್ಪಿ ಒಪ್ಪಂದ ಮಾಡಿಕೊಂಡು ಮದುವೆಯಾಗಿದ್ದಾರೆ.

ಜುಲೈ 2013ರಲ್ಲಿ ಇಬ್ಬರು ಕೂಡ ಯಾರಿಗೂ ತಿಳಿಯದಂತೆ ಮಾದುವೆಯಾಗಿದ್ದಾರೆ. ಈ ಒಪ್ಪಂದದ ಪ್ರಕಾರ ಮದುವೆಯಾಗಿರುವುದನ್ನು ಯಾರಿಗೂ ಹೇಳಬಾರದು, ಹಾಗೂ ಹಣಕಾಸಿನ ವಿಚಾರಗಳನ್ನು ಬಗ್ಗೆಯೂ ಗುಟ್ಟಾಗಿರಬೇಕು ಎಂದು ಹೇಳಿಕೊಂಡಿದ್ದಾರೆ. ಇದರ ಜತೆಗೆ ಈ ವ್ಯಕ್ತಿಯ ಮರಣ ನಂತರ ಅವರ ಮೂತ್ರಪಿಂಡವನ್ನು ವಾಂಗ್ ಕ್ಸಿಯಾವೊಗೆ ನೀಡಬೇಕು ಎಂದು ಒಪ್ಪಂದ ಮಾಡಿಕೊಂಡಿದ್ದಾರೆ. ಮನುಷ್ಯ ನಿರ್ಧಾರವೇ ಒಂದು ದೈವದ ಇಚ್ಚೆಯೇ ಬೇರೆ ಆಗಿತ್ತು. ಈ ಒಪ್ಪಂದದ ಮದುವೆ ಪ್ರೀತಿಗೆ ತಿರುಗಿದೆ. ಒಬ್ಬರನೊಬ್ಬರು ಬಿಟ್ಟಿರಲಾರದಷ್ಟು ಪ್ರೀತಿಸಲು ಶುರು ಮಾಡಿದ್ದಾರೆ. ಅವರ ನಡುವೆ ಇದ್ದ ಸಲುಗೆ, ಕಾಳಜಿ, ಪ್ರೀತಿ ಇಬ್ಬರನ್ನು ಒಂದು ಮಾಡಿದೆ.ಜತೆಗೆ ಇಬ್ಬರು ಸೇರಿ ಬೀದಿ ಬದಿಯಲ್ಲಿ ಹೂವಿನ ಅಂಗಡಿ ಮಾಡಿಕೊಂಡು ಸಂತೋಷದ ಜೀವನವನ್ನು ನಡೆಸಿದ್ದಾರೆ. ದಿನಗಳು ಹೋದಂತೆ ಇಬ್ಬರ ನಡುವೆ ಸಕಾರಾತ್ಮಕ ವಿಚಾರಗಳು ಬೆಳೆದು ತಮಗೆ ಬಂದ ಕಾಯಿಲೆಯನ್ನು ದೂರು ಮಾಡಿಕೊಂಡಿದ್ದಾರೆ.

## ಪೋಸ್ಟ್ ಆಫೀಸ್ POSCS ಸ್ಕೀಮ್: ವರ್ಷಕ್ಕೆ ಎರಡೂವರೆ ಲಕ್ಷ ರೂವರೆಗೆ ಬಡ್ಡಿ ಆದಾಯ

ಪೋಸ್ಟ್ ಆಫೀಸ್‌ನಲ್ಲಿ ಹಲವಾರು ಸಣ್ಣ ಉಳಿತಾಯ ಯೋಜನೆಗಳು ಜಾರಿಯಲ್ಲಿವೆ. ಇವುಗಳ ಪೈಕಿ ಸುಕನ್ಯಾ ಸಮೃದ್ಧಿ, ಹಿರಿಯ ನಾಗರಿಕರ ಉಳಿತಾಯ ಯೋಜನೆಗಳು ಅತ್ಯಧಿಕ ಬಡ್ಡಿ ನೀಡುತ್ತವೆ. ಎರಡಕ್ಕೂ ವಾರ್ಷಿಕ ಶೇ 8.2 ಬಡ್ಡಿ ನೀಡಲಾಗುತ್ತದೆ. ಸುಕನ್ಯಾ ಸಮೃದ್ಧಿ ಅಕೌಂಟ್ ಹೆಣ್ಮಕ್ಕಳಿಗಾಗಿ ದೀರ್ಘಕಾಲ ಹೂಡಿಕೆ ಹೇಳಿ ಮಾಡಿಸಿದ್ದಾಗಿದೆ. ಇನ್ನೊಂದೆಡೆ ಪೋಸ್ಟ್ ಆಫೀಸ್ ಸೀನಿಯರ್ ಸಿಟಿಜನ್ ಸ್ಕೀಮ್ (SCSSS) ಲಂಪ್ಸಮ್ ಹೂಡಿಕೆಯಿಂದ ನಿಯಮಿತ ಆದಾಯ ಪಡೆಯಲು ಸಹಾಯಕವಾಗಿದೆ.

ಪೋಸ್ಟ್ ಆಫೀಸ್ ಸೀನಿಯರ್ ಸಿಟಿಜನ್ ಸ್ಕೀಮ್ ಬಗ್ಗೆ

**ಯಾರು ಅರ್ಹರು: 60 ವರ್ಷ ವಯಸ್ಸು ದಾಟಿದವರು**

**ಹೂಡಿಕೆ ಮೊತ್ತ: 1,000 ರೂನಿಂದ ಹಿಡಿದು 30,00,000 (ಮೂವತ್ತು ಲಕ್ಷ) ರೂವರೆಗೂ ಲಂಪ್ಸಮ್ ಆಗಿ ಹೂಡಿಕೆ.**

**ಹೂಡಿಕೆ ಅವಧಿ: 5 ವರ್ಷಕ್ಕೆ ಮೆಚ್ಯೂರಿಟಿ. ಬೇಕೆಂದರೆ ಪ್ರತೀ 3 ವರ್ಷಕ್ಕೊಮ್ಮೆ ನವೀಕರಿಸಬಹುದು.**

**ಬಡ್ಡಿ: ಸದ್ಯಕ್ಕೆ ಶೇ. 8.2 ಬಡ್ಡಿ ನಿಗದಿ ಮಾಡಲಾಗಿದೆ. ಮೂರು ತಿಂಗಳಿಗೊಮ್ಮೆ ಬಡ್ಡಿದರ ಪರಿಷ್ಕರಣೆ ಆಗುತ್ತದೆ.**

ಆದಾಯ ಹೇಗೆ?: ಪ್ರತೀ ತ್ರೈಮಾಸಿಕಕ್ಕೊಮ್ಮೆ ಬಡ್ಡಿಯನ್ನು ನೀಡಲಾಗುತ್ತದೆ.

ಪೋಸ್ಟ್ ಆಫೀಸ್ ಎಸ್‌ಸಿಎಸ್‌ನಲ್ಲಿ 30 ಲಕ್ಷ ರೂ ಹೂಡಿಕೆಗೆ ಎಷ್ಟು ಆದಾಯ?

ಪೋಸ್ಟ್ ಆಫೀಸ್ ಸೀನಿಯರ್ ಸಿಟಿಜನ್ ಸ್ಕೀಮ್‌ನಲ್ಲಿ ನೀವು 30 ಲಕ್ಷ ರೂವರೆಗೂ ಹೂಡಿಕೆ ಮಾಡಲು ಅವಕಾಶ ಇರುತ್ತದೆ. ಒಂದು ವೇಳೆ ನೀವು 30 ಲಕ್ಷ ರೂ ಅನ್ನು ಲಂಪ್ಸಮ್ ಆಗಿ ಡೆಪಾಸಿಟ್ ಮಾಡಿದರೆ ವರ್ಷಕ್ಕೆ ಬಡ್ಡಿ 2.46 ಲಕ್ಷ ರೂ ಆಗುತ್ತದೆ. ಪ್ರತೀ ಮೂರು ತಿಂಗಳಿಗೆ ಬಡ್ಡಿ ಆದಾಯವನ್ನು ಹಂಚಲಾಗುತ್ತದೆ. ಇದನ್ನು ಮಾಸಿಕವಾಗಿ ನೀವು ವಿಭಜಿಸಿದಾಗ ತಿಂಗಳಿಗೆ 20,500 ರೂ ಆಗುತ್ತದೆ. ಹೆಚ್ಚೂಕಡಿಮೆ 20,000 ರೂ ಮಾಸಿಕ ಆದಾಯ ಸೃಷ್ಟಿಯಾಗುತ್ತದೆ.

ನಿಮಗೆ ಮಾಸಿಕವಾಗಿ ಕೈಗೆ ಆದಾಯ ಕೊಡುವಂತಹ ಸ್ಕೀಮ್ ಬೇಕಿದ್ದರೆ ಪೋಸ್ಟ್ ಆಫೀಸ್‌ನಲ್ಲೇ ಮಂತ್ಲಿ ಇನ್ಕಮ್ ಸ್ಕೀಮ್ ಇದೆ. ಇದರಲ್ಲಿ ಸೀನಿಯರ್ ಸಿಟಿಜನ್ ಸ್ಕೀಮ್‌ನಷ್ಟು ಬಡ್ಡಿ ಸಿಗುವುದಿಲ್ಲವಾದರೂ ಫಿಕ್ಸೆಡ್ ಡೆಪಾಸಿಟ್‌ಗಿಂತ ಉತ್ತಮ ಬಡ್ಡಿ ಇರುತ್ತದೆ.

ಪೋಸ್ಟ್ ಆಫೀಸ್ ಸೀನಿಯರ್ ಸಿಟಿಜನ್ ಸ್ಕೀಮ್‌ನಲ್ಲಿ ಟ್ಯಾಕ್ಸ್ ಬೆನಿಫಿಟ್ ಮತ್ತಿತರ ಅಂಶಗಳು

ಪೋಸ್ಟ್ ಆಫೀಸ್ ಸೀನಿಯರ್ ಸಿಟಿಜನ್ ಸ್ಕೀಮ್ ಐದು ವರ್ಷದ ಅವಧಿಯದ್ದಾಗಿದೆ. ಅವಧಿಗೆ ಮುನ್ನ ಠೇವಣಿ ಹಿಂಪಡೆಯಲು ನಿರ್ಬಂಧಗಳಿವೆ. ಅಕೌಂಟ್ ತೆರೆದು ಒಂದು ವರ್ಷದೊಳಗೆ ಕ್ಲೋಸ್ ಮಾಡಿದರೆ ಬಡ್ಡಿ ಸಿಗುವುದಿಲ್ಲ. ಕೇವಲ ಅಸಲು ಹಣವನ್ನು ಮರಳಿಸಲಾಗುತ್ತದೆ.

1-2 ವರ್ಷದಲ್ಲಿ ಅಕೌಂಟ್ ನಿಲ್ಲಿಸಿದರೆ ಬಡ್ಡಿ ಮೊತ್ತದಿಂದ ಶೇ. 1.5ರಷ್ಟನ್ನು ಮುರಿದುಕೊಳ್ಳಲಾಗುತ್ತದೆ. 2-5 ವರ್ಷದಲ್ಲಿ ನಿಲ್ಲಿಸಿದರೆ ಶೇ. 1ರಷ್ಟು ಬಡ್ಡಿ ಹಣ ಮುರಿದುಕೊಳ್ಳಲಾಗುತ್ತದೆ.

ಪೋಸ್ಟ್ ಆಫೀಸ್ ಸೀನಿಯರ್ ಸಿಟಿಜನ್ ಸ್ಕೀಮ್‌ನಲ್ಲಿ ಮಾಡಿದ ಹೂಡಿಕೆಗೆ ಟ್ಯಾಕ್ಸ್ ಬೆನಿಫಿಟ್ ಸಿಗುತ್ತದೆ. ಸೆಕ್ಷನ್ 80ಸಿ ಅಡಿಯಲ್ಲಿ ಒಂದೂವರೆ ಲಕ್ಷ ರೂವರೆಗೂ ಹೂಡಿಕೆಗೆ ಟ್ಯಾಕ್ಸ್ ಡಿಡಕ್ಷನ್ ಪಡೆಯಬಹುದು.

ಹಾಗೆಯೇ, ಈ ಸ್ಕೀಮ್‌ನಲ್ಲಿ ನಿಮಗೆ ಒಂದು ಹಣಕಾಸು ವರ್ಷದಲ್ಲಿ ಬಡ್ಡಿ ಆದಾಯ ಒಂದು ಲಕ್ಷ ರೂ ದಾಟಿದರೆ, ಆ ಹೆಚ್ಚುವರಿ ಮೊತ್ತಕ್ಕೆ ಟಿಡಿಎಸ್ ಅನ್ವಯ ಆಗುತ್ತದೆ.

## ಆರ್‌ಎಸ್‌ಎಸ್ ಪಥ ಸಂಚಲನ ನಿರ್ಬಂಧಕ್ಕೆ ಹೈಕೋರ್ಟ್ ತಡೆ



**ಬೆಂಗಳೂರು**: ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಚಟುವಟಿಕೆಗಳಿಗೆ ನಿರ್ಬಂಧ ವಿಧಿಸಲು ರಾಜ್ಯದ ಕಾಂಗ್ರೆಸ್ ಸರ್ಕಾರ ಕೈಗೊಂಡಿದ್ದ ಆದೇಶಕ್ಕೆ ಕರ್ನಾಟಕ ಹೈಕೋರ್ಟ್‌ನ ಧಾರವಾಡ ಪೀಠವು ಮಧ್ಯಂತರ ತಡೆಯಾಜ್ಞೆ ನೀಡಿದೆ. ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಏಕಸದಸ್ಯ ಪೀಠವು ಈ ಆದೇಶವನ್ನು ಹೊರಡಿಸಿದ್ದು, ಮುಂದಿನ ವಿಚಾರಣೆಯನ್ನು ನವೆಂಬರ್ 17, 2025ಕ್ಕೆ ಮುಂದೂಡಿದೆ. ಈ ತೀರ್ಪು ರಾಜ್ಯ ಸರ್ಕಾರಕ್ಕೆ ಗಣನೀಯ ಹಿನ್ನಡೆಯಾಗಿದೆ.

ರಾಜ್ಯ ಸರ್ಕಾರವು ಸರ್ಕಾರಿ ಆವರಣದಲ್ಲಿ ಖಾಸಗಿ ಸಂಸ್ಥೆಗಳು ಯಾವುದೇ ಚಟುವಟಿಕೆಗಳನ್ನು ನಡೆಸುವ ಮೊದಲು ಪೂರ್ವಾನುಮತಿ ಪಡೆಯುವುದನ್ನು ಕಡ್ಡಾಯಗೊಳಿಸುವ ಆದೇಶವನ್ನು ಹೊರಡಿಸಿತ್ತು. ಈ ಆದೇಶವು ಆರ್‌ಎಸ್‌ಎಸ್‌ನಂತಹ ಸಂಘಟನೆಗಳ ಪಥ ಸಂಚಲನ ಮತ್ತು ಇತರ ಚಟುವಟಿಕೆಗಳನ್ನು ನಿರ್ಬಂಧಿಸುವ ಗುರಿಯನ್ನು ಹೊಂದಿತ್ತು. ಆದರೆ, ಈ ಆದೇಶವನ್ನು ಪ್ರಶ್ನಿಸಿ ಹುಬ್ಬಳ್ಳಿಯ ಪುನಶ್ಚೇತನ ಸೇವಾ ಸಂಸ್ಥೆಯು ಹೈಕೋರ್ಟ್‌ನಲ್ಲಿ ರಿಟ್ ಅರ್ಜಿಯನ್ನು ಸಲ್ಲಿಸಿತ್ತು.

ಅರ್ಜಿಯಲ್ಲಿ, ಸರ್ಕಾರದ ಆದೇಶವು ಕಾನೂನುಬಾಹಿರ ಮತ್ತು ಸಂವಿಧಾನ ವಿರೋಧಿಯಾಗಿದೆ ಎಂದು ವಾದಿಸಲಾಗಿತ್ತು. ಆದೇಶದಲ್ಲಿ 10 ಜನಕ್ಕಿಂತ ಹೆಚ್ಚು ಜನರು ಗುಂಪಾಗಿ ಸೇರುವುದನ್ನು ನಿರ್ಬಂಧಿಸಲಾಗಿತ್ತು, ಇದು ಸಂವಿಧಾನದ ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ಸಂಸ್ಥೆ ವಾದ ಮಂಡಿಸಿತು. ಸಭೆ, ಸಮಾರಂಭಗಳಲ್ಲಿ ಜನರು ಒಟ್ಟಾಗಿ ಸೇರುವ ಹಕ್ಕನ್ನು ಸರ್ಕಾರದ ಒಂದು ಆದೇಶದ ಮೂಲಕ ಕಿತ್ತುಕೊಳ್ಳಲಾಗದು ಎಂದು ಅರ್ಜಿಯಲ್ಲಿ ಒತ್ತಿಹೇಳಲಾಗಿತ್ತು. ಪಾರ್ಕ್‌ಗಳು, ಮೈದಾನಗಳು, ಮತ್ತು ಇತರ ಸಾರ್ವಜನಿಕ ಸ್ಥಳಗಳಲ್ಲಿ ಗುಂಪಾಗಿ ಸೇರುವುದನ್ನು ನಿಷೇಧಿಸುವ ಆದೇಶವು ಸಂವಿಧಾನದ 19ನೇ ವಿಧಿಯಲ್ಲಿ ಒದಗಿಸಲಾದ ಸ್ವಾತಂತ್ರ್ಯವನ್ನು ಕಸಿದುಕೊಳ್ಳುವಂತಿದೆ ಎಂದು ವಾದಿಸಲಾಗಿತ್ತು.

ನ್ಯಾಯಾಲಯವು ಈ ವಾದವನ್ನು ಗಂಭೀರವಾಗಿ ಪರಿಗಣಿಸಿ, ಸರ್ಕಾರದ ಆದೇಶಕ್ಕೆ ಮಧ್ಯಂತರ ತಡೆಯಾಜ್ಞೆ ನೀಡಿತು. ಈ ತೀರ್ಪಿನಿಂದ ಆರ್‌ಎಸ್‌ಎಸ್‌ನಂತಹ ಸಂಘಟನೆಗಳು ತಮ್ಮ ಕಾನೂನುಬದ್ಧ ಚಟುವಟಿಕೆಗಳನ್ನು ಮುಂದುವರಿಸಲು ತಾತ್ಕಾಲಿಕ ಅವಕಾಶ ಪಡೆದಿವೆ.

## ಪತಿ ಮನೆಯನ್ನು ಶುಚಿಯಾಗಿಟ್ಟಿಲ್ಲವೆಂದು ಕೋಪಗೊಂಡು ಆತನ ಕತ್ತು ಸೀಳಿದ ಪತ್ನಿ

ವಾಷಿಂಗ್ಟನ್: ಮನೆಯ ಕೆಲಸದ ವಿಚಾರವಾಗಿ ಗಂಡ-ಹೆಂಡತಿ ನಡುವೆ ಜಗಳ(Clash)ವಾಗುವುದು ಸಾಮಾನ್ಯ ಆದರೆ ಎಲ್ಲವೂ ಮಾತಿನಿಂದಲೇ ಬಗೆಹರಿಯುತ್ತದೆ. ಆದರೆ ಇಲ್ಲೊಬ್ಬ ಮಹಿಳೆ ತನ್ನ ಗಂಡ ಮನೆಯನ್ನು ಶುಚಿಯಾಗಿಟ್ಟುಕೊಂಡಿಲ್ಲ ಎಂಬ ಕಾರಣಕ್ಕೆ ಕೋಪಗೊಂಡು ಆತನ ಕುತ್ತಿಗೆಗೆ ಚಾಕುವಿನಿಂದ ಇರಿದಿರುವ ಘಟನೆ ಅಮೆರಿಕದಲ್ಲಿ ನಡೆದಿದೆ.

ಅಮೆರಿಕದ ಉತ್ತರ ಕೆರೊಲಿನಾದಲ್ಲಿ ಭಾರತ ಮೂಲದ ಅಮೆರಿಕನ್ ಮಹಿಳೆಯೊಬ್ಬರು ತನ್ನ ಪತಿಯ ಮೇಲೆ ಚಾಕುವಿನಿಂದ ಹಲ್ಲೆ ಡನೆಸಿದ ಆರೋಪದ ಮೇಲೆ ಬಂಧನಕ್ಕೊಳಗಾಗಿದ್ದಾರೆ. ಮನೆಯನ್ನು ಸ್ವಚ್ಛಗೊಳಿಸುವ ವಿಷಯಕ್ಕೆ ಇಬ್ಬರ ನಡುವೆ ಜಗಳ ನಡೆದಿತ್ತು ಎನ್ನಲಾಗಿದೆ. ಮಹಿಳೆಯನ್ನು ಚಂದ್ರಪ್ರಭಾ ಸಿಂಗ್ ಎಂದು ಗುರಿತಿಸಲಾಗಿದೆ. ಅವರು ಶಾಲೆಯಲ್ಲಿ ಶಿಕ್ಷಕ ಸಹಾಯಕರಾಗಿ ಕೆಲಸ ಮಾಡುತ್ತಿದ್ದಾರೆ. ಚಂದ್ರಪ್ರಭಾ ಅವರನ್ನು ಅಕ್ಟೋಬರ್ 12 ರಂದು ಪತಿಯ ಮೇಲೆ ಉದ್ದೇಶಪೂರ್ವಕವಾಗಿ ದಾಳಿ ಮಾಡಿದ್ದ ಆರೋಪದ ಮೇಲೆ ಬಂಧಿಸಲಾಗಿತ್ತು.

ಪೊಲೀಸರ ಪ್ರಕಾರ, ಈ ಘಟನೆ ಉತ್ತರ ಕೆರೊಲಿನಾದ ಚಾರ್ಲೋಟ್‌ನ ಬ್ಯಾಲಂಟೈನ್ ಪ್ರದೇಶದ ಫಾಕ್ಸ್‌ಹೇವನ್ ಡ್ರೈವ್‌ನಲ್ಲಿರುವ ಅಪಾರ್ಟ್‌ಮೆಂಟ್‌ನಲ್ಲಿ ನಡೆದಿದೆ. ಚಂದ್ರಪ್ರಭಾ ಅವರು ಎಂಡ್‌ಹೇವನ್ ಕಿಂಡರ್‌ಗಾರ್ಟನ್‌ನಿಂದ ಮೂರನೇ ತರಗತಿಗೆ ಪಾಠ ಮಾಡುತ್ತಿದ್ದರು.

ನ್ಯಾಯಾಲಯದಲ್ಲಿ ಸಲ್ಲಿಸಲಾದ ಅಫಿಡವಿಟ್ ಪ್ರಕಾರ, ಸಿಂಗ್ ಅವರ ಪತಿ ಅರವಿಂದ್ ಸಿಂಗ್ ಎಂದು ಗುರುತಿಸಲಾದ ವ್ಯಕ್ತಿ ಪೊಲೀಸರಿಗೆ ಮಾಹಿತಿ ನೀಡಿದ್ದು, ಮನೆ ಸ್ವಚ್ಛವಾಗಿಲ್ಲದ ಕಾರಣ ತನ್ನ ಹೆಂಡತಿ ಕೋಪಗೊಂಡು ಉದ್ದೇಶಪೂರ್ವಕವಾಗಿ ಚಾಕುವಿನಿಂದ ಹಲ್ಲೆ ನಡೆಸಿದ್ದಾಳೆ ಎನ್ನಲಾಗಿದೆ.

ಆದರೆ, ಚಂದ್ರಪ್ರಭಾ ಸಿಂಗ್ ಘಟನೆಗಳ ಬಗ್ಗೆ ಬೇರೆಯದೇ ಆದ ವಿವರಣೆಯನ್ನು ನೀಡಿದ್ದಾರೆ. ತಾನು ಊಟ ತಯಾರಿಸುತ್ತಿದ್ದಾಗ, ತನ್ನ ಪತಿ ಬಳಿ ಸಹಾಯ ಮಾಡಬಹುದೇ ಎಂದು ಕೇಳಿದ್ದಾಗಿ ಅವರು ತನಿಖಾಧಿಕಾರಿಗಳಿಗೆ ತಿಳಿಸಿದ್ದಾರೆ. ಆ ಸಮದಲ್ಲಿ ಇಬ್ಬರ ನಡುವೆ ಜಗಳ ನಡೆದಿದೆ. ಆಕಸ್ಮಿಕವಾಗಿ ಚಾಕು ಗಂಡನ ಕುತ್ತಿಗೆಗೆ ಇರಿದಿದೆ ಎಂದಿದ್ದಾರೆ.

ಬೆಳಗ್ಗೆ ಸುಮಾರು 10.49 ಕ್ಕೆ ಪೊಲೀಸರು ಸ್ಥಳಕ್ಕೆ ಬರುವ ಹೊತ್ತಿಗೆ, ಅರವಿಂದ್ ಸಿಂಗ್ ಅವರನ್ನು ಕುತ್ತಿಗೆಗೆ ಆಗಿದ್ದ ಗಂಭೀರ ಗಾಯಗಳಾಗಿ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಬಂಧನದ ನಂತರ, ಮ್ಯಾಜಿಸ್ಟ್ರೇಟ್ ಆರಂಭದಲ್ಲಿ ಚಂದ್ರಪ್ರಭಾ ಸಿಂಗ್ ಅವರಿಗೆ ಜಾಮೀನು ನಿರಾಕರಿಸಿದರು. ಆದಾಗ್ಯೂ, ಅಕ್ಟೋಬರ್ 13 ರಂದು ನ್ಯಾಯಾಲಯಕ್ಕೆ ಹಾಜರಾದಾಗ, ಅವರ ಜಾಮೀನು 10,000 ಡಾಲರ್‌ಗೆ ಗೆ ನಿಗದಿಪಡಿಸಲಾಯಿತು.

ಎಲೆಕ್ಟ್ರಾನಿಕ್ ಮಾನಿಟರಿಂಗ್ ಸಾಧನವನ್ನು ಧರಿಸುವುದು ಮತ್ತು ಪತಿಯೊಂದಿಗೆ ಯಾವುದೇ ಸಂಪರ್ಕವನ್ನು ಹೊಂದಿರದಿರುವುದು ಸೇರಿದಂತೆ ಕೆಲವು ಷರತ್ತುಗಳೊಂದಿಗೆ ಅವರು ಸೋಮವಾರ ಜೈಲಿನಿಂದ ಬಿಡುಗಡೆ ಮಾಡಲಾಯಿತು.

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ: 9538786812 / 9880655634**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.